ಸಂಪುಟ : 10 ಸಂಚಿಕೆ: 250 ಪುಟ : 4+2 ಬೆಲೆ: 3.00 ರವಿವಾರ ನವೆಂಬರ್ 16 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 250 Pages : 4+2 Price : 3.00 Sunday November 16 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ರಸ್ತೆಗಿಳಿದ ಎತ್ತು-ಚಕ್ಕಡಿ ಗಾಡಿ । ರೈತರ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ರೈತ ಸಂಘಟನೆಗಳಿಂದ ಧರಣಿ ಸತ್ಯಾಗ್ರಹ

# ಸಂಕಷ್ಟದಲ್ಲಿರುವ ರೈತರಿಗೆ ನ್ಯಾಯ ಕೊಡಿಸಲು ಮುಂದಾಗಿ




ರೈತರೆಲ್ಲ ಬೆಳೆ ಮಾರಾಟ ಮಾಡಿದ ಮೇಲೆ ಖರೀದಿ ಕೇಂದ್ರ ಪ್ರಾರಂಭವಾದರೆ ಅದು ಸ್ಮಶಾನ ಕೇಂದ್ರ ತೆರೆದಂತಾಗುತ್ತದೆ. ಸಂಕಷ್ಟದಲ್ಲಿರುವ ರೈತರಿಗೆ ಈಗಲಾದರೂ ಈ ಭಾಗದ ಸಂಸದರು, ಸಚಿವರು, ಶಾಸಕರು ರೈತರ ಹೋರಾಟಕ್ಕೆ ಬೆಂಬಲವಾಗಿ ನಿಂತು ಅವರಿಗೆ ನ್ಯಾಯ ಕೊಡಿಸಲು ಮುಂದಾಗಬೇಕು. ನಿರ್ಲಕ್ಷ್ಯ ತೆ-ೂರಿದರೆ ಹೋರಾಟದ ಸ್ವರೂಪ ಬದಲಾಗಲಿದೆ. ರೈತರ ಆಕ್ರೋಶದ ಕಟ್ಟೆಯೊಡೆದು ಉಂಟಾಗುವ ಅನಾಹುತಕ್ಕೆ ಜನಪ್ರತಿನಿಧಿಗಳು, ಅಧಿಕಾರಿಗಳು ಉತ್ತರ ಕೊಡಬೇಕಾಗುತ್ತದೆ ಎಂದು ರವಿಕಾಂತ ಅಂಗಡಿ ಎಚ್ಚರಿಸಿದರು.




**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಗೋವಿನಜೋಳದ ಬೆಂಬಲ ಬೆಲೆ ಖರೀದಿ ಕೇಂದ್ರ ಪ್ರಾರಂಭವಾಗಬೇಕು, ರೈತರಿಗೆ ಬೆಳೆವಿಮೆ, ಬೆಳೆಹಾನಿ ಪರಿಹಾರ ಜಮೆ ಮಾಡಬೇಕು ಎಂಬಿತ್ಯಾದಿ ಬೇಡಿಕೆಗಳಿಗೆ ಆಗ್ರಹಿಸಿ ಶನಿವಾರ ರೈತ ಸಂಘಟನೆಗಳು ಕೈಗೊಂಡ ಪ್ರತಿಭಟನಾ ಮೆರವಣಿಗೆ ಮತ್ತು ಅಹೋರಾತ್ರಿ ಧರಣಿ ಸತ್ಯಾಗ್ರಹಕ್ಕೆ ಅಭೂತಪೂರ್ವ ಬೆಂಬಲ ವ್ಯಕ್ತವಾಯಿತು.

ರೈತರು, ರೈತ ಮುಖಂಡರು, ವಿವಿಧ ಕನ್ನಡಪರ ಸಂಘಟನೆಗಳು, ಕೃಷಿಪರಿಕರ ಮಾರಾಟಗಾರ ಸಂಘದವರು ಸೇರಿ ಎತ್ತು-ಚಕ್ಕಡಿಗಳನ್ನೊಳಗೊಂಡ ಪ್ರತಿಭಟನಾ ಮೆರವಣಿಗೆ ಪಟ್ಟಣದ ಸೋಮೇಶ್ವರ ದೇವಸ್ಥಾನದಿಂದ ಪ್ರಾರಂಭಗೊಂಡು ಮುಖ್ಯ ಬಜಾರ್ ರಸ್ತೆಯ ಮೂಲಕ ಸಾಗಿ ಕೆಲ ಹೊತ್ತು ಪಾಳಾ-ಬಾದಾಮಿ ರಸ್ತೆಯಲ್ಲಿ ಪ್ರತಿಭಟನೆ ನಡೆಸಿದರು. ಬಳಿಕ ಶಿಗ್ಲಿ ನಾಕಾದ ಹತ್ತಿರ ನಿಗದಿಪಡಿಸಿದ ಧರಣಿ ಸ್ಥಳದಲ್ಲಿ ಬೇಡಿಕೆಗಳಿಗೆ ಆಗ್ರಹಿಸಿ ಮತ್ತು ಸರ್ಕಾರದ ಧೋರಣೆಗಳ ವಿರುದ್ಧ ಘೋಷಣೆ ಕೂಗಿದರು.

ಈ ವೇಳೆ ಮಾತನಾಡಿದ ಉತ್ತರ ಕರ್ನಾಟಕ ಮಹಾಸಭಾ ರಾಜ್ಯಾಧ್ಯಕ್ಷ, ವಕೀಲ ರವಿಕಾಂತ ಅಂಗಡಿ, ಉತ್ತರ ಕರ್ನಾಟಕ ಭಾಗದ ರೈತರು ಮಳೆಯನ್ನೇ ಆಧರಿಸಿ ಕೃಷಿಯನ್ನೇ ನಂಬಿ ಬದುಕುತ್ತಾರೆ. ಈ ವರ್ಷ ಅತಿವೃಷ್ಟಿಯಿಂದ ಮುಂಗಾರಿನ ಬೆಳೆಗಳೆಲ್ಲ ಹಾಳಾಗಿದೆ. ಇದೀಗ ಮೆಕ್ಕೆಜೋಳದ ಬೆಳೆಯೇ ಬದುಕಿಗೆ ಆಸರೆಯಾಗಿದೆ. ಆದರೆ ಸರ್ಕಾರ ಘೋಷಿಸಿದ 2400 ರೂ ಕನಿಷ್ಠ ಬೆಂಬಲ ಬೆಲೆ ಘೋಷಣೆಗೆ ಸೀಮಿತವಾಗಿದೆ. ಸದ್ಯ ಕ್ವಿಂಟಲ್‌ಗೆ 1700–1800 ರೂಪಾಯಿಗೂ ಸಹ ಗೋವಿನ ಜೋಳದ ಬೆಳೆ ಖರೀದಿಸುವವರಿಲ್ಲದಂತಾಗಿದೆ. ರೈತರಿಗೆ ದಿಕ್ಕು ತೋಚದಂತಾಗಿದ್ದು, ಈ ಸಂದರ್ಭದಲ್ಲಿ ರೈತರಿಗೆ ನಿಮ್ಮೊಂದಿಗೆ ನಾವಿದ್ದೇವೆ ಎಂದು ಆತ್ಮಸ್ಥೈರ್ಯ ತುಂಬುವ, ಹೋರಾಟಕ್ಕೆ ಬೆಂಬಲವಾಗಿ ನಿಲ್ಲಬೇಕಾದ ಈ ಭಾಗದ ಜನಪ್ರತಿನಿಧಿಗಳು ಇಸ್ಪೀಟ್ ಆಡುವ ವ್ಯಕ್ತಿಗಳ ಪರವಾಗಿ ಪೊಲೀಸ್ ಠಾಣೆಯ ಮುಂದೆ ಅಹೋರಾತ್ರಿ ಪ್ರತಿಭಟನೆ, ಧರಣಿ ಮಾಡುತ್ತಿರುವುದು ನೋವಿನ ಸಂಗತಿಯಾಗಿದೆ ಎಂದರು.

ಹೋರಾಟದ ನೇತೃತ್ವ ವಹಿಸಿರುವ ರೈತ ಮುಖಂಡ ಮಂಜುನಾಥ ಮಾಗಡಿ, ಹೊನ್ನಪ್ಪ ವಡ್ಡರ, ಚಂಬಣ್ಣ ಬಾಳಿಕಾಯಿ ಮಾತನಾಡಿ, ಲಕ್ಷ್ಮೇಶ್ವರ ತಾಲೂಕು ವ್ಯಾಪ್ತಿಯಲ್ಲಿ 21 ಸಾವಿರ ಹೆಕ್ಟೇರ್ ಮತ್ತು ಶಿರಹಟ್ಟಿ ತಾಲೂಕಿನಲ್ಲಿ 24 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಗೋವಿನಜೋಳ ಬೆಳೆಯಲಾಗಿದೆ. ಈಗಾಗಲೇ ಒಂದು ತಿಂಗಳಿಂದ ರೈತರು ಗೋವಿನಜೋಳ ಒಕ್ಕಲಿ ಮಾಡಿ ಇಟ್ಟುಕೊಂಡಿದ್ದು ಮಾರಾಟ ಮಾಡದಿದ್ದರೆ ಹುಳ ಹಿಡಿಯುತ್ತದೆ. ಕೇಂದ್ರ ಮತ್ತು ರಾಜ್ಯ ಸರಕಾರಗಳು ಜವಾಬ್ದಾರಿಯಿಂದ ▶▶3ನೇ ಪುಟಕ್ಕೆ

### ಎಲ್.ಸಿ.ಡಿ.ಸಿ ಸಮೀಕ್ಷಾ ಕಾರ್ಯಕ್ರಮದ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್

# ಸಮೀಕ್ಷಾ ಕಾರ್ಯ ಯಶಸ್ವಿಗೊಳಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಕುಷ್ಠರೋಗ ಪ್ರಕರಣ ಪತ್ತೆ ಹಚ್ಚುವ (ಎಲ್.ಸಿ.ಡಿ.ಸಿ.) ಸಮೀಕ್ಷಾ ಕಾರ್ಯಕ್ರಮವನ್ನು ನವೆಂಬರ್ 24ರಿಂದ ಡಿಸೆಂಬರ್ 9ರವರೆಗೆ ನಡೆಸಲಾಗುತ್ತಿದ್ದು, ಸಮೀಕ್ಷೆ ಕಾರ್ಯ ಯಶಸ್ವಿಗೊಳಿಸಲು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.



ಎಲ್.ಸಿ.ಡಿ.ಸಿ ಸಮೀಕ್ಷಾ ಕಾರ್ಯಕ್ರಮದ ಯಶಸ್ಸಿಗಾಗಿ ವಿವಿಧ ಇಲಾಖೆಗಳ ಸಹಕಾರ ಅಗತ್ಯವಾಗಿದೆ. ಶಾಲೆಯಲ್ಲಿರುವ ಮಕ್ಕಳ ತಪಾಸಣೆಗೆ ಮಾಡಲು ಬಂದಾಗ ಆಯಾ ಶಾಲೆಯ ಶಿಕ್ಷಕರು ಹಾಗೂ ಮುಖ್ಯೋಪಾಧ್ಯಾಯರು ತಂಡದವರೊಂದಿಗೆ ಸಹಕರಿಸುವಂತೆ ನೋಡಿಕೊಳ್ಳಬೇಕು. ಎಲ್.ಸಿ.ಡಿ.ಸಿ ಕಾರ್ಯಕ್ರಮದ ಕುರಿತು ಸಾರ್ವಜನಿಕರಿಗೆ ವ್ಯಾಪಕ ಪ್ರಚಾರ ಕೈಗೊಳ್ಳಬೇಕು. ಗ್ರಾಮ ಪಂಚಾಯಿತಿಯಿಂದ ಕಸದ ವಿಲೇವಾರಿ ವಾಹನದ ಮುಖಾಂತರ ಮೈಕಿಂಗ್ ಮಾಡುವುದು, ಗ್ರಾಮ ಮಟ್ಟದಲ್ಲಿ ಡಂಗುರ ಸಾರುವ ಮೂಲಕ ಪ್ರಚಾರ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಎಲ್.ಸಿ.ಡಿ.ಸಿ ಕಾರ್ಯಕ್ರಮದ ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ. ರಾಜೇಂದ್ರ ಬಸರಿಗಿಡದ ಮಾತನಾಡಿ, ಜಿಲ್ಲೆಯ ಒಟ್ಟು 120 ಗ್ರಾಮಗಳಲ್ಲಿ ಎಲ್.ಸಿ.ಡಿ.ಸಿ ಸಮೀಕ್ಷೆ ಕೈಗೊಳ್ಳಲಾಗುವುದು. ಎಲ್.ಸಿ.ಡಿ.ಸಿ ಸಮೀಕ್ಷಾ ಕಾರ್ಯಕ್ರಮವನ್ನು ನವೆಂಬರ್ 24ರಿಂದ ಡಿಸೆಂಬರ್ 9ರವರೆಗೆ 14 ದಿನಗಳವರೆಗೆ ರಜಾ ದಿನಗಳನ್ನು ಹೊರತುಪಡಿಸಿ ನಡೆಸಲಾಗುತ್ತಿದೆ. ಒಂದು ಸಾವಿರ ಜನಸಂಖ್ಯೆಗೆ ಒಂದು ತಂಡವನ್ನು ರಚಿಸಲಾಗಿದೆ. ಈ ತಂಡದಲ್ಲಿ ಒಬ್ಬ ಆಶಾ ಕಾರ್ಯಕರ್ತೆ/ಅಂಗನವಾಡಿ ಕಾರ್ಯಕರ್ತೆ+ಒಬ್ಬ ಪುರುಷ ಸ್ವಯಂ ಸೇವಕ ಇರುತ್ತಾರೆ. ಸಮೀಕ್ಷಾ ಕಾರ್ಯದ ಮೇಲ್ವಿಚಾರಣೆಗಾಗಿ 10 ಸಮೀಕ್ಷಾ ತಂಡಗಳಿಗೆ ಓರ್ವರನ್ನು (ಎಚ್.ಐ.ಓ/ಪಿ.ಎಚ್.ಸಿ.ಓ/ಎಸ್.ಎಚ್.ಐ.ಓ/ ಎಸ್.ಪಿ.ಎಚ್.ಸಿ.ಓ/ಬಿ.ಎಚ್.ಇ.ಓ) ಮೇಲ್ವಿಚಾರಕರನ್ನಾಗಿ ಕ್ರಿಯಾ ಯೋಜನೆ ಮಾಡಲಾಗಿದೆ. ಜಿಲ್ಲೆಯಲ್ಲಿ 434 ಸಮೀಕ್ಷಾ ತಂಡಗಳ ಹಾಗೂ 57 ಅಧಿಕಾರಿಗಳನ್ನು ಮೇಲ್ವಿಚಾರಕರನ್ನಾಗಿಸಿ ಕ್ರಿಯಾ ಯೋಜನೆ ರಚಿಸಲಾಗಿದೆ ಎಂದು ಸಭೆಗೆ ವಿವರಿಸಿದರು.

ಇದೇ ಸಂದರ್ಭದಲ್ಲಿ ಎಲ್.ಸಿ.ಡಿ.ಸಿ ಸಮೀಕ್ಷಾ ಕಾರ್ಯಕ್ರಮ ಕುರಿತ ಭಿತ್ತಿಪತ್ರವನ್ನು ಬಿಡುಗಡೆ ಮಾಡಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಆರ್.ಸಿ.ಎಚ್ ಅಧಿಕಾರಿ ಡಾ. ಮೀನಾಕ್ಷಿ, ಕುಟುಂಬ ಕಲ್ಯಾಣಾಧಿಕಾರಿ ವೈ.ಕೆ. ಭಜಂತ್ರಿ, ಡಾ. ಅರುಂಧತಿ ಕುಲಕರ್ಣಿ, ತಾಲೂಕಾ ವೈದ್ಯಾಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಕಸಾಪ ದತ್ತಿ ಉಪನ್ಯಾಸ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ನ. 16ರಂದು ಸಂಜೆ 6.30 ಗಂಟೆಗೆ ತೋಂಟದ ಸಿದ್ಧಲಿಂಗ ಶ್ರೀಗಳ ಕನ್ನಡ ಭವನ, ಕಸಾಪ ಕಾರ್ಯಾಲಯ ಗದಗ ಇಲ್ಲಿ ಸಂಗೀತಗಾರರಾದ ಎಸ್.ಎನ್. ಪಾಟೀಲ ಮೇಗೂರ ಸ್ಮರಣಾರ್ಥ ದತ್ತಿ ಉಪನ್ಯಾಸ ಹಾಗೂ ಮಕ್ಕಳ ದಿನಾಚರಣೆ ಅಂಗವಾಗಿ ಸನ್ಮಾನ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು ಶಾಸಕ ಜಿ.ಎಸ್. ಪಾಟೀಲ ಉದ್ಘಾಟಿಸುವರು.

'ಗದಗ: ಸಂಗೀತ ಗಂಗೋತ್ರಿ' ವಿಷಯವಾಗಿ ಸಾಹಿತಿ ಹಾಗೂ ಸಂಗೀತಗಾರರಾದ ರಾಜಗುರು ಗುರುಸ್ವಾಮಿ ಕಲಕೇರಿ ಉಪನ್ಯಾಸ ನೀಡುವರು.

ಅಧ್ಯಕ್ಷತೆಯನ್ನು ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು.

ಪ್ರಾಸ್ತಾವಿಕ ನುಡಿಯನ್ನು ಡಾ. ಎಸ್.ಎನ್. ಪಾಟೀಲ ಪ್ರತಿಷ್ಠಾನದ ಕಾರ್ಯದರ್ಶಿ ಸಿಎನ್ಎ ಪಾಟೀಲ ಮೇಗೂರು ನುಡಿಯುವರು.

ಮಕ್ಕಳ ದಿನಾಚರಣೆ ಅಂಗವಾಗಿ ಬಾಲ ಸಾಹಿತಿ ಸಾಕ್ಷಿ ರವಿ ದೇವರಡ್ಡಿ ನರೇಗಲ್, ರಾಜ್ಯಮಟ್ಟದ ಕುಸ್ತಿಪಟು ರಾಹುಲ ವಸಂತ ಸಿದ್ಧಮ್ಮನಹಳ್ಳಿ ಇವರನ್ನು ಸನ್ಮಾನಿಸಲಾಗುವದು. ಕಾರ್ಯಕ್ರಮದಲ್ಲಿ ಸಾಹಿತ್ಯಾಭಿಮಾನಿಗಳು, ಸಾಹಿತಿಗಳು, ಪರಿಷತ್ತಿನ ಸದಸ್ಯರು ಭಾಗವಹಿಸಬೇಕೆಂದು ಕಿಶೋರಬಾಬು ನಾಗರಕಟ್ಟಿ, ದತ್ತಪ್ರಸನ್ನ ಪಾಟೀಲ, ಡಿ.ಎಸ್. ಬಾಪುರಿ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

# ಮಹಾಯಜ್ಞದಲ್ಲಿ ಪಾಲ್ಗೊಂಡ ಶಾಸಕ ಸಿ.ಸಿ. ಪಾಟೀಲ



**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದಲ್ಲಿ ನಡೆಯುತ್ತಿರುವ ಅತಿರುದ್ರ ಮಹಾಯಾಗ ಕಾರ್ಯಕ್ರಮಕ್ಕೆ ಮಾಜಿ ಸಚಿವರು ಹಾಗೂ ನರಗುಂದ ಶಾಸಕರಾದ ಸಿ.ಸಿ. ಪಾಟೀಲ ಅವರು ಕುಟುಂಬ ಸಮೇತರಾಗಿ ಬಂದು ಕಾರ್ಯಕ್ರಮ ವೀಕ್ಷಿಸಿ, ನಾಗಾಸಾಧುಗಳ ದರ್ಶನ ಭಾಗ್ಯ ಪಡೆದರು.

ಅತಿರುದ್ರ ಮಹಾಯಜ್ಞ ನಡೆಯುತ್ತಿರುವ ಪರಿಸರದಲ್ಲಿ ವಿದ್ಯಾರ್ಥಿನಿ ವಿನಲ್ ಖಟವಟೆ ಸುಮಾರು 108 ಪ್ರದಕ್ಷಣೆ ಹಾಕಿ ಲೋಕಕಲ್ಯಾಣದ ಯಜ್ಞದಲ್ಲಿ ಭಕ್ತಿಭಾವವನ್ನು ಪ್ರದರ್ಶಿಸಿದರು. ಈ ಭಕ್ತಿ ಭಾವವನ್ನು ಗಮನಿಸಿದ ನಾಗಾಸಾಧು ಸಹದೇವಾನಂದ ಗಿರಿ ಗುರೂಜಿ ಮಹಾರಾಜ ವಿನಲ್ ಕಟವಟೆ ಅವರನ್ನು ಸನ್ಮಾನಿಸಿ ಆಶೀರ್ವದಿಸಿದರು.

ಪ್ರಪ್ರಥಮ ಬಾರಿಗೆ ನಗರದ ವಿದ್ಯಾದಾನ ಸಮಿತಿಯ ಆವರಣದಲ್ಲಿ ಅತಿರುದ್ರ ಮಹಾಯಜ್ಞ ಸಮಿತಿಯ ಅಡಿಯಲ್ಲಿ ನಾಗಾಸಾದು ಶ್ರೀ ಸಹಾದೇವಾನಂದ ಗಿರಿ ಜಿ ಮಹಾರಾಜರ ನೇತೃತ್ವದಲ್ಲಿ ನಡೆಯುತ್ತಿರುವ ಕಿರಿಯ ಕುಂಭಮೇಳದಲ್ಲಿ ವಿಶೇಷ ಹೋಮ-ಹವನ ಪೂಜೆ ಕಾರ್ಯಕ್ರಮಗಳು ವೀಕ್ಷಿಸಿ ಶಿವಲಿಂಗುವಿನ ದರ್ಶನ ಪಡೆಯಲು ಜನಸಾಗರವೇ ಹರಿದು ಬರುತ್ತಿದೆ.

ಅತಿರುದ್ರ ಮಹಾಯಜ್ಞ ಸಮಿತಿ ಅಧ್ಯಕ್ಷ ಕಿರಣ ಭೂಮಾ, ರಾಜು ಕುರುಡಗಿ, ಎಸ್.ಎಚ್. ಶಿವನಗೌಡ್ರ, ರವಿ ಗುಂಜಿಕರ, ರಮೇಶ ಸಜ್ಜಗಾರ, ರವಿ ಮಾನ್ವಿ, ಪ್ರಶಾಂತ ನಾಯಕರ ಮುಂತಾದವರು ಉಪಸ್ಥಿತರಿದ್ದರು.

### ಜಪಾನ್‌ನ ನೈಡೆಕ್ ಕಂಪನಿಯ ಆರ್ಚರ್ಡ್ ಹಬ್‌ಗೆ ಚಾಲನೆ ನೀಡಿದ ಸಚಿವ ಎಂ.ಬಿ. ಪಾಟೀಲ

# ಆರ್ಚರ್ಡ್ ಹಬ್‌ನಿಂದ ಸ್ಥಳೀಯರಿಗೂ ಲಾಭ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಇಲ್ಲಿನ ಬೇಲೂರು ಕೈಗಾರಿಕಾ ಪ್ರದೇಶದಲ್ಲಿ ಜಪಾನ್ ಮೂಲದ ನೈಡೆಕ್ ಕಂಪನಿಯು 600 ಕೋಟಿ ರೂಪಾಯಿ ವೆಚ್ಚದಲ್ಲಿ ಸ್ಥಾಪಿಸಿರುವ ಆರ್ಚರ್ಡ್ ಹಬ್‌ಗೆ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ ಶುಕ್ರವಾರ ಚಾಲನೆ ನೀಡಿದರು.



ಈ ಸಂದರ್ಭದಲ್ಲಿ ಮಾತನಾಡಿದ ಅವರು, ನೈಡೆಕ್ ಕಂಪನಿಯ ಈ ಸಂಸ್ಥೆಯ ಸ್ಥಾಪನೆಗೆ ಐದು ತಿಂಗಳ ಹಿಂದೆ ನಾನೇ ಭೂಮಿಪೂಜೆ ನೆರವೇರಿಸಿದ್ದೆ. ಕಂಪನಿಯು ಕೇಳಿದ್ದ ಸವಲತ್ತುಗಳನ್ನೆಲ್ಲ ರಾಜ್ಯ ಸರಕಾರವು ತ್ವರಿತವಾಗಿ ಪೂರೈಸಿದೆ. ಇದಕ್ಕೆ ತಕ್ಕಂತೆ ಕಂಪನಿಯು ಕ್ಷಿಪ್ರಗತಿಯಲ್ಲಿ ಇಷ್ಟೊಂದು ಅಗಾಧ ಬಂಡವಾಳ ಹೂಡಿ, ಈ ಆಧುನಿಕ ಕೇಂದ್ರವನ್ನು ಸ್ಥಾಪಿಸಿರುವುದು ಮಾದರಿಯಾಗಿದೆ ಎಂದರು.

ನೈಡೆಕ್ ಕಂಪನಿಯ ಆರ್ಚರ್ಡ್ ಹಬ್ ನಾವೀನ್ಯತೆ ಮತ್ತು ತಂತ್ರಜ್ಞಾನ ಆಧಾರಿತ ಉದ್ಯಮ ಕೇಂದ್ರವಾಗಿದೆ. ಇಲ್ಲಿ ಹೊಸ ಹೊಸ ಔದ್ಯಮಿಕ ಕಲ್ಪನೆಗಳು ಮತ್ತು ಸಂಶೋಧನೆ ಜೊತೆಗೂಡಲಿವೆ. ಅಂತಿಮವಾಗಿ ಇದು ಕೈಗಾರಿಕಾ ಅಭಿವೃದ್ಧಿಯ ಹೆದ್ದಾರಿಯನ್ನು ಸೃಷ್ಟಿಸಲಿದೆ ಎಂದು ಬಣ್ಣಿಸಿದರು.

ನೈಡೆಕ್ ಕಂಪನಿ ಸೇರಿದಂತೆ ಜಪಾನಿನ ಹತ್ತಾರು ಕಂಪನಿಗಳು ರಾಜ್ಯದಲ್ಲಿ ನೆಲೆಯೂರಿದ್ದು, ನಮ್ಮಲ್ಲಿ ಜಪಾನಿ ಕೈಗಾರಿಕಾ ಟೌನ್‌ಶಿಪ್ ಕೂಡ ಇದೆ. ತಾವು ಇತ್ತೀಚೆಗೆ ಜಪಾನಿಗೆ ಭೇಟಿ ನೀಡಿದಾಗ ರಾಜ್ಯಕ್ಕೆ 4,500 ಕೋಟಿ ರೂಪಾಯಿಗಳ ಬಂಡವಾಳ ಹೂಡಿಕೆ ಖಾತ್ರಿ ಸಿಕ್ಕಿದೆ. ನಮ್ಮ ಹಿಂದಿನ ಬಾರಿಯ ಜಪಾನ್ ಮತ್ತು ದಕ್ಷಿಣ ಕೊರಿಯಾ ಭೇಟಿಯಲ್ಲಿ ಕೂಡ 6 ಸಾವಿರ ಕೋಟಿ ರೂಪಾಯಿ ಹೂಡಿಕೆ ಬಂದಿತು ಎಂದು ಸಚಿವ ಎಂ.ಬಿ. ಪಾಟೀಲ ಸ್ಮರಿಸಿದರು.

ಉತ್ತರ ಕರ್ನಾಟಕ ಭಾಗದಲ್ಲಿ ಜಪಾನಿನ ಕಂಪನಿಯೊಂದು ಮಾಡಿರುವ ಬೃಹತ್ ಹೂಡಿಕೆ ಇದಾಗಿದೆ. ಇದರಿಂದ ಇಲ್ಲಿ ಉದ್ಯೋಗ ಸೃಷ್ಟಿಯೂ ಆಗಲಿದ್ದು, ಪರೋಕ್ಷವಾಗಿ ಸ್ಥಳೀಯರಿಗೆ ಕೂಡ ಲಾಭವಾಗಲಿದೆ. ರಾಜ್ಯ ಸರಕಾರವು ಕೂಡ ತನ್ನ ಹೊಸ ಕೈಗಾರಿಕಾ ನೀತಿಯಲ್ಲಿ ಬೆಂಗಳೂರನ್ನು ಹೊರತುಪಡಿಸಿ ಬೇರೆ ಬೇರೆ ಭಾಗಗಳಲ್ಲಿ ಉದ್ಯಮ ಸ್ಥಾಪಿಸುವಂತೆ ಹಲವು ರಚನಾತ್ಮಕ ಕ್ರಮಗಳನ್ನು ಅಳವಡಿಸಲಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಕೇಂದ್ರ ಸಚಿವ ಪ್ರಹ್ಲಾದ ಜೋಶಿ, ಶಾಸಕ ಅರವಿಂದ ಬೆಲ್ಲದ, ನೈಡೆಕ್ ಕಾರ್ಪೊರೇಷನ್ ಅಧ್ಯಕ್ಷ ಹಿರೋಶಿ ಕೋಬೆ, ಕಂಪನಿಯ ಮೋಷನ್ ಮತ್ತು ಎನರ್ಜಿ ವಿಭಾಗದ ಮುಖ್ಯಸ್ಥ ಮೈಕೆಲ್ ಬ್ರಿಗ್ಸ್, ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆಯ ಆಯುಕ್ತೆ ಗುಂಜನ್ ಕೃಷ್ಣ ಉಪಸ್ಥಿತರಿದ್ದರು.

## ಪದ್ಮಶ್ರೀ ಸಾಲುಮರದ ತಿಮ್ಮಕ್ಕ ನಿಧನಕ್ಕೆ ಶ್ರೀ ರಂಭಾಪುರಿ ಜಗದ್ಗುರುಗಳ ಸಂತಾಪ



■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ವೃಕ್ಷ ಮಾತೆಯೆಂದೇ ಖ್ಯಾತಿಯಾಗಿದ್ದ ಶತಾಯುಷಿ ಸಾಲುಮರದ ತಿಮ್ಮಕ್ಕ ಅಗಲಿಕೆಗೆ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಗಿಡ-ಮರಗಳನ್ನೇ ತಮ್ಮ ಮಕ್ಕಳೆಂದು ಭಾವಿಸಿ ಪೋಷಿಸುತ್ತಿದ್ದ ಅವರು 8 ಸಾವಿರಕ್ಕೂ ಹೆಚ್ಚು ಮರಗಳನ್ನು ಬೆಳೆಸಿದ್ದು ಹಿರಿದಾದ ಸಾಧನೆಯಾಗಿದೆ. ಶ್ರೀ ರಂಭಾಪುರಿ ಪೀಠದ ಹಲವಾರು ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಅವರು ಆಶೀರ್ವಾದ ಪಡೆದದ್ದು ತಮ್ಮ ಮನದಲ್ಲಿ ಹಸಿರಾಗಿದೆ. ಸರಳ ಸಜ್ಜನಿಕೆಯ ಸಾಲುಮರದ ತಿಮ್ಮಕ್ಕ ಅವರ ಅಗಲಿದ ಪವಿತ್ರ ಆತ್ಮಕ್ಕೆ ದಯಾಘನನಾದ ಪರಮಾತ್ಮನು ಚಿರಶಾಂತಿ ನೀಡಲಿ ಮತ್ತು ಅವರ ಅಗಲಿಕೆಯನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬದವರಿಗೂ ಮತ್ತು ಅಭಿಮಾನಿಗಳಿಗೂ ನೀಡಲಿ ಎಂದು ಶ್ರೀಗಳು ತಮ್ಮ ಸಂತಾಪ ಸೂಚಕ ಸಂದೇಶದಲ್ಲಿ ತಿಳಿಸಿದ್ದಾರೆ.

### ಮಕ್ಕಳ ದಿನಾಚರಣೆ ಅಂಗವಾಗಿ ಜರುಗಿದ ಸ್ಪರ್ಧೆಗಳ ವಿಜೇತರಿಗೆ ಪ್ರಶಸ್ತಿ ವಿತರಣೆ

# ವಿದ್ಯಾರ್ಥಿಗಳು ದೃಢ ವಿಶ್ವಾಸ ಬೆಳೆಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕರ್ನಾಟಕ ರಾಜ್ಯ ಬಾಲಭವನ ಸೊಸೈಟಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಧಾರವಾಡ ಜಿಲ್ಲಾ ಬಾಲಭವನ ಇವರ ಸಂಯುಕ್ತ ಆಶ್ರಯದಲ್ಲಿ ಮಕ್ಕಳ ದಿನಾಚರಣೆ ಅಂಗವಾಗಿ ಮಕ್ಕಳಿಗೆ ಜಿಲ್ಲಾ ಮಟ್ಟದಲ್ಲಿ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು.

ಜಿಲ್ಲಾ ಮಟ್ಟದಲ್ಲಿ ಸೃಜನಾತ್ಮಕ ಕಲೆ, ಬರವಣಿಗೆ, ಪ್ರದರ್ಶನ ಕಲೆಗಳಾದ ಶಾಸ್ತ್ರೀಯ ನೃತ್ಯ, ಜಾನಪದ ನೃತ್ಯ, ಕರ್ನಾಟಕ ಶಾಸ್ತ್ರೀಯ ಸಂಗೀತ, ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ಸುಗಮ ಸಂಗೀತ ಸ್ಪರ್ಧೆ, ವಾದ್ಯ ಸಂಗೀತ, ಯಕ್ಷಗಾನ, ಯಕ್ಷಿಣಿ, ಯೋಗ, ನೃತ್ಯ, ಮ್ಯಾಜಿಕ್, ವಿಜ್ಞಾನದಲ್ಲಿ ನೂತನ ಆವಿಷ್ಕಾರ ಸೇರಿದಂತೆ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು.

ಸ್ಪರ್ಧೆಯಲ್ಲಿ 9ರಿಂದ 16 ವರ್ಷದ ಸುಮಾರು 155 ಮಕ್ಕಳು



ಭಾಗವಹಿಸಿದ್ದರು. ಸೃಜನಾತ್ಮಕ ಕಲೆಯ ತೀರ್ಪುಗಾರರಾಗಿ ಭಾರತೀಯ ಕಲಾಕೇಂದ್ರದ ಶಿಕ್ಷಕ ಎನ್.ಆರ್. ನಾಯ್ಕರ, ಕರ್ನಾಟಕ ವಿಶ್ವವಿದ್ಯಾಲಯ ಚಿತ್ರಕಲಾ ಪ್ರಾಧ್ಯಾಪಕ ವೆಂಕಟೇಶ ಕುಮಾರ ಎಚ್.ಕೆ, ಸೃಜನಾತ್ಮಕ ಬರವಣಿಗೆ ತೀರ್ಪುಗಾರರಾಗಿ ಸಾಹಿತಿ ಮಾರ್ತಾಂಡಪ್ಪ ಕತ್ತಿ, ಶಿಕ್ಷಕ ಕೆ.ಪಿ. ಶೇಖರ ಮತ್ತು ಸೃಜನಾತ್ಮಕ ಪ್ರದರ್ಶನ ಕಲೆಯ ತೀರ್ಪುಗಾರರಾಗಿ ನೃತ್ಯ ಶಿಕ್ಷಕ ಸೈಯದ್ ಎ.ಎಮ್, ಭರತನಾಟ್ಯ ಯಕ್ಷಗಾನ ಶಿಕ್ಷಕಿ ನಿಧಿ ಶೆಟ್ಟಿ ಹಾಗೂ ವಿಜ್ಞಾನದಲ್ಲಿ ನೂತನ ಆವಿಷ್ಕಾರ ಸ್ಪರ್ಧೆಯ ತೀರ್ಪುಗಾರರಾಗಿ ವಿಜ್ಞಾನ ಮತ್ತು ತಂತ್ರಜ್ಞಾನ ವಿಭಾಗದ ಪ್ರಾಧ್ಯಾಪಕ ಸುಧೀನ ಎಚ್.ಕೆ. ಹಾಗೂ ಭಾರತೀಯ ಜ್ಞಾನ ವಿಜ್ಞಾನ ಸಮಿತಿ ಶಿಕ್ಷಕಿ ನೀಲಾಂಬಿಕಾ ಕಿರಣ್ ಶೆಟ್ಟರ ಆಗಮಿಸಿದ್ದರು.

ಮುಖ್ಯ ಅತಿಥಿಗಳಾಗಿದ್ದ ಮಲ್ಲಿಕಾರ್ಜುನ ಚಿಕ್ಕಮಠ ಮಾತನಾಡಿ, ಮಕ್ಕಳು ಸೋಲಿನ ಮನೋಬಲವನ್ನು ಗಟ್ಟಿಗೊಳಿಸಿಕೊಂಡಾಗ ಮಾತ್ರ ಗೆಲುವಿನ ಮೆಟ್ಟಿಲು ಮುಟ್ಟಲು ಸಾಧ್ಯ. ಎಲ್ಲ ಮಕ್ಕಳು ದೃಢ ವಿಶ್ವಾಸ ಬೆಳಸಿಕೊಳ್ಳಬೇಕೆಂದು ತಿಳಿಸಿದರು.

ಕರ್ನಾಟಕ ಬಾಲವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಇಲಾಖೆಯು ಮಕ್ಕಳಿಗಾಗಿ ಅನೇಕ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದ್ದು, ಈ ಕಾರ್ಯಕ್ರಮಗಳನ್ನು ಮಕ್ಕಳಿಗೆ ತಲುಪಿಸುವಲ್ಲಿ ಅಧಿಕಾರಿಗಳು ಮುತುವರ್ಜಿ ವಹಿಸಿ ಕೆಲಸ ಮಾಡಬೇಕು. ಸರ್ಕಾರ ಆಯೋಜಿಸುವ ವಿವಿಧ ಕಾರ್ಯಕ್ರಮಗಳಲ್ಲಿ ಮಕ್ಕಳು ಭಾಗವಹಿಸುವಂತೆ ಕ್ರಮ ವಹಿಸಲು ಸೂಚಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಡಾ. ಎಚ್. ಎಚ್. ಕುಕನೂರ ಮಾತನಾಡಿ, ಪ್ರತಿ ವರ್ಷವೂ ಜಿಲ್ಲಾ ಬಾಲಭವನದಲ್ಲಿ ಮಕ್ಕಳಿಗೆ ಸ್ಪರ್ಧೆಗಳನ್ನು ಏರ್ಪಡಿಸಿ ವಿಜೇತ ಮಕ್ಕಳನ್ನು ರಾಜ್ಯ ಮಟ್ಟದ ಕಲಾಶ್ರೀ ಪ್ರಶಸ್ತಿ ಆಯ್ಕೆ ಶಿಬಿರದಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಿಕೊಡಲಾಗುವುದು. ಮಕ್ಕಳಲ್ಲಿರುವ ಪ್ರತಿಭೆಗಳನ್ನು ಗುರುತಿಸಲು ಇದೊಂದು ಉತ್ತಮ ವೇದಿಕೆಯಾಗಿದ್ದು, ಇಂತಹ ಅವಕಾಶಗಳನ್ನು ಮಕ್ಕಳು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಕಾರ್ಯಕ್ರಮದ ಕೊನೆಯಲ್ಲಿ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿ ವಿಜೇತರಾದ ಮಕ್ಕಳಿಗೆ ಬಹುಮಾನ ಹಾಗೂ ಪ್ರಶಂಸನಾ ಪತ್ರ ವಿತರಿಸಲಾಯಿತು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ಡಾ. ಕಮಲಾ ಬೈಲೂರ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಿಬ್ಬಂದಿ ವರ್ಗದವರು, ಶಾಲಾ ಮಕ್ಕಳು ಮತ್ತು ಪೋಷಕರು, ಉಪಸ್ಥಿತರಿದ್ದರು.

### ದೀಪೋತ್ಸವ ಕಾರ್ಯಕ್ರಮ ಉದ್ಘಾಟಿಸಿದ ಶ್ರೀ ಚನ್ನಬಸವ ಶಿವಯೋಗಿಗಳು

# ದೀಪಗಳು ಶುದ್ಧತೆಯ ಪ್ರತೀಕ



■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ದೀಪಗಳು ಶುದ್ಧತೆಯ ಪ್ರತೀಕವಾಗಿದ್ದು, ನಕಾರಾತ್ಮಕ ಶಕ್ತಿಗಳನ್ನು ದೂರ ಮಾಡಿ ಸಕಾರಾತ್ಮಕ ಶಕ್ತಿಯನ್ನು ಹೆಚ್ಚಿಸುತ್ತವೆ ಎಂದು ನೀಲಗುಂದ ಗುಡ್ಡದ ವಿರಕ್ತಮಠದ ಶ್ರೀ ಚನ್ನಬಸವ ಶಿವಯೋಗಿಗಳು ಹೇಳಿದರು.

ಪಟ್ಟಣದ ಹರಿಹರ ರಸ್ತೆಯ ಆದಿಬಸವೇಶ್ವರನಗರದ ಶ್ರೀ ವರತೇ ಭೂತಪ್ಪ ಸ್ವಾಮಿ ಹಾಗೂ ಶ್ರೀ ರೇಣುಕಾಎಲ್ಲಮ್ಮ ದೇವಿಯ ಕಾರ್ತಿಕೋತ್ಸವದ ಅಂಗವಾಗಿ ಜರುಗಿದ ದೀಪೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಶ್ರೀಗಳು ಆಶೀರ್ವಚನ ನೀಡಿದರು.

ದೇಹದಿಂದ ಕತ್ತಲೆಯನ್ನು ಅಂದರೆ ಅಜ್ಞಾನ, ಕೋಪ, ಅಸೂಯೆ ಮುಂತಾದವುಗಳನ್ನು ತೊಲಗಿಸಿ, ಆತ್ಮ ಜ್ಞಾನವನ್ನು ಹೆಚ್ಚಿಸಲು ದೀಪಾರಾಧನೆ ಸಹಕಾರಿ. ದೀಪಗಳು ಶುದ್ಧತೆಯ ಪ್ರತೀಕವಾಗಿದ್ದು, ನಕಾರಾತ್ಮಕ ಶಕ್ತಿಗಳನ್ನು ದೂರ ಮಾಡಿ ಸಕಾರಾತ್ಮಕ ಶಕ್ತಿಯನ್ನು ಹೆಚ್ಚಿಸುತ್ತವೆ. ದೀಪ ಬೆಳಗಿಸುವುದರಿಂದ ಪೂರ್ವಜರ ಆಶೀರ್ವಾದ ಸಿಗುತ್ತದೆ ಎಂಬ ನಂಬಿಕೆಯಿದ್ದು, ಮನುಷ್ಯರನ್ನು ಮನುಷ್ಯರಾಗಿ ಕಾಣುವಂತೆ ಆಗಲಿ ಎಂದರು.

ಮುತ್ತಿಗಿಯ ಹಾಲಸ್ವಾಮಿ ಮಠದ ಹಾಲಸ್ವಾಮೀಜಿ ಮಾತನಾಡಿ, ಕತ್ತಲಿನಿಂದ ಬೆಳಕಿಗೆ ತೆರಳುವ ಸಮಯದಲ್ಲಿ ಭಕ್ತರ ಮನದಲ್ಲಿ ಜ್ಯೋತಿ ಬೆಳಗಲಿ, ವಿದ್ಯಾರ್ಥಿಗಳಿಗೆ ಉತ್ತಮ ಭವಿಷ್ಯ ಸಿಗಲಿ ಎಂದರು.

ಶ್ರೀ ಶರಣಬಸವ ಬುದ್ಧ ಭೀಮಜೀ ವಿದ್ಯಾಸಂಸ್ಥೆಯ ಕಾರ್ಯದರ್ಶಿ ಗುಂಡಗತ್ತಿ ಕೋಟ್ರಪ್ಪ ಮಾತನಾಡಿ, ಕತ್ತಲಿನಿಂದ ಬೆಳಕಿನ ಕಡೆಗೆ ದಾರಿ ತೋರಿಸುವ ದೀಪಗಳ ಹಬ್ಬವೇ ಕಾರ್ತಿಕೋತ್ಸವ. ಆಷಾಢ ಮಾಸದ ಶುಕ್ಲ ಪಕ್ಷದ ಏಕಾದಶಿಯಂದು ಮಹಾವಿಷ್ಣುವು ಶಯನವನ್ನು ಪ್ರಾರಂಭಿಸುತ್ತಾನೆ. ನಂತರ ಕಾರ್ತಿಕ ಮಾಸದ ಏಕಾದಶಿಯಂದು ನಿದ್ದೆಯಿಂದ ಏಳುತ್ತಾನೆ. ಈ ದಿನವನ್ನು ಪ್ರಬೋಧಿನಿ ಏಕಾದಶಿ ಎಂದು ಕರೆಯುತ್ತಾರೆ.

ಕಾರ್ತಿಕ ಮಾಸದಲ್ಲಿ ವಿಷ್ಣುವು ನಿದ್ರೆಯಿಂದ ಎಚ್ಚರಗೊಂಡು ಇಡೀ ಸೃಷ್ಟಿಯ ಮೇಲೆ ಸಂತೋಷ ಮತ್ತು ಅನುಗ್ರಹವನ್ನು ನೀಡುತ್ತಾನೆ ಎಂಬ ನಂಬಿಕೆಯಿದೆ ಎಂದರು.

ನಾಗಲಾಪುರದ ಶ್ರೀಗಳು, ಬೆಣ್ಣಿಹಳ್ಳಿಯ ಪಂಚಾಕ್ಷರಿ ಶ್ರೀಗಳು, ಶ್ರೀಮಹರ್ಷಿ ವಾಲ್ಮೀಕಿ ಪ್ರಶಸ್ತಿ ಪುರಸ್ಕೃತ ಕೆ.ಉಚ್ಚೆಂಗೆಪ್ಪ, ಗೊಂದಾಳಿ ಸಮಾಜದ ರಾಜ್ಯ ಅಧ್ಯಕ್ಷ ಗೊಂದಾಳಿ ಗೋಪಾಲ ಮಾತನಾಡಿದರು.

ಅರಸಿಕೇರಿಯ ಕೋಟ್ರಯ್ಯ ಸ್ವಾಮೀಜಿ. ಅಜ್ಜಯ್ಯ ಸ್ವಾಮಿಮಠದ ವೀರಣ್ಣ ಸಾನ್ನಿಧ್ಯ ವಹಿಸಿದ್ದರು.

ನಿಸರ್ಗ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲ ಕಲ್ಯಾಣದವರ್, ನಾಟಿ ವೈದ್ಯರ ಸಂಘದ ತಾಲೂಕಾಧ್ಯಕ್ಷ ಇಬ್ರಾಹಿಂ ಸಾಹೇಬ್, ಮಹಿಳಾ ಕಾಂಗ್ರೆಸ್ ಕಾರ್ಯದರ್ಶಿ ರೇಣುಕಾಬಾಯಿ, ಮೇದಾರ ಸಮಾಜದ ಕೃಷ್ಣಪ್ಪ, ಶಿಕ್ಷಕರಾದ ಹೆಗ್ಗಪ್ಪ, ಮೈಲಾರಪ್ಪ, ಚೀಗ-ಟೇರಿ ಕರಿಬಸಪ್ಪ, ರಾಮಚಂದ್ರಪ್ಪ, ಮೋತಿ ಮಾರುತಿ, ಕಲಾವಿದ ತಿಮ್ಮಣ್ಣ, ಅಣ್ಣಪ್ಪ ಸೇರಿದಂತೆ ಇತರರು ಇದ್ದರು.

ಪ್ರಧಾನ ಅರ್ಚಕರಾದ ವಿ.ಸಣ್ಣ ಅಜ್ಜಯ್ಯ ಮಾತನಾಡಿ, ಕಾರ್ತಿಕ ಮಾಸದಲ್ಲಿ ಕೈಗೊಳ್ಳುವ ವ್ರತ, ಪೂಜೆ ಹಾಗೂ ಧಾರ್ಮಿಕ ವಿಧಿ-ವಿಧಾನಗಳು ಅತ್ಯಂತ ಶ್ರೇಷ್ಠತೆಯಿಂದ ಕೂಡಿದ್ದು, ಹೆಚ್ಚು ಫಲ ಪ್ರಾಪ್ತಿಯಾಗುತ್ತದೆ. ಕಾರ್ತಿಕ ಮಾಸದಲ್ಲಿ ನಿಯಮ-ನಿಷ್ಠೆಯಿಂದ ಉಪವಾಸವಿದ್ದು ದೇವಸ್ಥಾನಕ್ಕೆ ಹೋಗಿ ದೀಪ ಹಚ್ಚಿದರೆ ಪುಣ್ಯ ಪ್ರಾಪ್ತಿಯಾಗುತ್ತದೆ. ಪ್ರತಿದಿನ ತುಳಸಿ ಗಿಡದ ಬಳಿ ದೀಪವನ್ನು ಹಚ್ಚಿದರೆ ಶುಭ. ಕಾರ್ತಿಕ ಮಾಸದಲ್ಲಿ ಜ್ಯೋತಿ ಬೆಳಗುವ ಮೂಲಕ ಮನಸ್ಸಿನಲ್ಲಿರುವ ಅಂಧಕಾರವನ್ನು ದೂರ ಮಾಡಿಕೊಳ್ಳಬಹುದು ಎಂದರು.

# ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಬದಲಾದ ವಾತಾವರಣಕ್ಕೆ ತಕ್ಕಂತೆ ಪಾಲಕರು ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವುದು ಪಾಲಕರ ಜವಾಬ್ದಾರಿ ಎಂದು ಎಸ್.ಸಿ. ಬಡ್ನಿ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ. 1ರಲ್ಲಿ ಮಕ್ಕಳ ದಿನಾಚರಣೆ ನಿಮಿತ್ತ ಪೋಷಕ-ಶಿಕ್ಷಕರ ಮಾಹಾಸಭೆ ಉದ್ಘಾಟಿಸಿ ಮಾತನಾಡಿ, ಮಕ್ಕಳ ಭಾವೀ ಭವಿಷ್ಯಕ್ಕೆ ಭೌತಿಕ ಮತ್ತು ಹಣದ ರೂಪದಲ್ಲಿ ಆಸ್ತಿ ಮಾಡುವ ಬದಲು ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವುದು ಪ್ರತಿಯೊಬ್ಬ ಪಾಲಕರ ಜವಾಬ್ದಾರಿಯಾಗಿದ್ದು, ಮಕ್ಕಳನ್ನೇ ಸಮಾಜದ ಆಸ್ತಿಯನ್ನಾಗಿ ಮಾಡಬೇಕು ಎಂದರು.

ಪೋಷಕ ಮುತ್ತಪ್ಪ ಹುಡೇದ ಮಾತನಾಡಿ, ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ. 1 157 ವಸಂತಗಳನ್ನು ಕಂಡಿದ್ದು, ಈ ಶಾಲೆಯ ಶಿಕ್ಷಕರು ಶ್ರಮವಹಿಸಿ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುತ್ತಿದ್ದಾರೆ. ಇದರ ಫಲವಾಗಿ ಈ ಶಾಲೆ ತನ್ನ ಗುಣಮಟ್ಟ ಕಾಯ್ದುಕೊಂಡಿದೆ. ಇಂತಹ ಶಾಲೆಯ ಶಿಕ್ಷಕರಿಗೆ ಪೋಷಕರು ಸಹಕರಿಸಿದಲ್ಲಿ ಮಕ್ಕಳ ಭವಿಷ್ಯ ಮತ್ತಷ್ಟು ಸುಧಾರಣೆಯಾಗುತ್ತದೆ ಎಂದರು.

ಶಾಲಾ ಸಂಸತ್ತು ಅಧ್ಯಕ್ಷ ಮಹ್ಮದ ಹನಿಫ್ ಮಾಣಿಕಭಾಯಿ ಅಧ್ಯಕ್ಷತೆ ವಹಿಸಿದ್ದರು. ಎಸ್‌ಡಿಎಂಸಿ ಅಧ್ಯಕ್ಷ ವಿ.ಡಿ. ಸಿದ್ದನಗೌಡರ, ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡರ, ಬಿ.ಎಲ್. ಜಾಧವ, ಮಂಜು ಗುಲಗಂಜಿ, ಶಿವಪ್ಪ ಮಡ್ಡಿ, ಉಪಾಧ್ಯಕ್ಷೆ ರೇಷ್ಮಾ ನದ್ದಿಮುಲ್ಲಾ, ದಾವಲಬಿ ಗಾಡಿ, ಪೀರದೋಷ ಸಿದ್ದಿ ಇದ್ದರು.



ನಗರದ ವಿದ್ಯಾದಾನ ಸಮಿತಿ ಮೈದಾನದಲ್ಲಿ ಅತಿರುದ್ರ ಮಹಾಯಜ್ಞ ಸಮಿತಿಯಿಂದ ನಡೆಯುತ್ತಿರುವ ಅತಿರುದ್ರ ಮಹಾಯಾಗ ಕಾರ್ಯಕ್ರಮದಲ್ಲಿ ದೇಶದ ವಿವಿಧ ಮೂಲೆಗಳಿಂದ ಆಗಮಿಸಿದ ನಾಗಸಾಧುಗಳು ಗದುಗಿನ ಜನತೆಯನ್ನು ಆಶೀರ್ವದಿಸಿದರು. ನಾಗಸಾಧುಗಳನ್ನು ನಗರದ ಜನತೆ ಉತ್ಸಾಹದಿಂದ ಕಣ್ತುಂಬಿಕೊಂಡರು.

# ಚಾಚಾ ನೆಹರು ಆಧುನಿಕ ಭಾರತದ ನಿರ್ಮಾತೃ



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತದ ಮೊದಲ ಪ್ರಧಾನಿ ಪಂಡಿತ ಜವಾಹರ್‌ಲಾಲ ನೆಹರು ಅವರು ಆಧುನಿಕ ಭಾರತದ ನಿರ್ಮಾತೃವಾಗಿದ್ದು, ಅವರ ದೂರದೃಷ್ಟಿಯ ಆಡಳಿತದಿಂದಲೇ ಭಾರತ ಅಭಿವೃದ್ಧಿಶೀಲ ರಾಷ್ಟ್ರಗಳ ಸಾಲಿಗೆ ಸೇರಲು ಸಾಧ್ಯವಾಯಿತು ಎಂದು ಪ್ರಾಚಾರ್ಯ ವಾಯ್. ಎಸ್. ಮತ್ತೂರ ಹೇಳಿದರು.

ಇಲ್ಲಿನ ಜಗದ್ಗುರು ತೋಂಟ-ದಾರ್ಯ ವಿದ್ಯಾಪೀಠದ ತೋಂಟದ ಸಿದ್ದೇಶ್ವರ ವಿಜ್ಞಾನ ವಾಣಿಜ್ಯ ಹಾಗೂ ಕಲಾ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಉಪನ್ಯಾಸಕರಾದ ಬಾಗ್ಯಲಕ್ಷ್ಮೀ ಚವಡಿ, ಜವಾಹರಲಾಲ ನೆಹರುರವರ ಜೀವನ ಮತ್ತು ಸಾಧನೆ ಕುರಿತು ಮಾತಾಡಿದರು. ಮತ್ತೋರ್ವ ಉಪನ್ಯಾಸಕರಾದ ಪ್ರತಿಭಾ ಆರ್ ಮಾತನಾಡಿ, ಇಂದಿನ ಮಕ್ಕಳೇ ನಾಳಿನ ಭವ್ಯ ಭಾರತದ ಪ್ರಜೆಗಳು ಎಂದು ತಿಳಿಸಿ, ಹೇಗೆ ವಿದ್ಯಾರ್ಥಿ ಜೀವನವನ್ನು ಸುಂದರವಾಗಿ ಕಟ್ಟಿಕೊಳ್ಳಬೇಕು ಎಂದು ಮಕ್ಕಳಿಗೆ ತಿಳಿಹೇಳಿದರು.

ನಂತರ ನಡೆದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಜಾನಪದ, ಭಾವಗೀತೆ, ಏಕಪಾತ್ರಾಭಿನಯ, ಮತ್ತು ನೃತ್ಯದಲ್ಲಿ ಭಾಗವಹಿಸಿದ್ದರು. ಉಮಾ ನಾಯ್ಕಲ್ ವಚನಗೀತೆ ಹಾಡಿದರು, ಉಪನ್ಯಾಸಕರಾದ ಅಮೀತ ಬುವಾ ಸ್ವಾಗತಿಸಿದರು. ಕಾರ್ತಿಕ ಪೋಲೀಸ್‌ಪಾಟೀಲ ನಿರೂಪಿಸಿದರು.ಶ್ವೇತಾ ನಿಲುಗಲ್ ವಂದಿಸಿದರು.

## ಬಿಹಾರ ವಿಧಾನಸಭಾ ಚುನಾವಣೆ: 128 ಸ್ಥಾನಗಳಲ್ಲಿ ಅಕ್ರಮ ನಡೆದಿದೆ ಎಂದ ಕೇರಳ ಕಾಂಗ್ರೆಸ್

■ವಿಜಯಸಾಕ್ಷಿ ಸುದ್ದಿ, ಬಿಹಾರ

ಇತ್ತೀಚೆಗೆ ಮುಕ್ತಾಯಗೊಂಡ 2025 ರ ಬಿಹಾರ ವಿಧಾನಸಭಾ ಚುನಾವಣೆಯಲ್ಲಿ 128 ಕ್ಷೇತ್ರಗಳಲ್ಲಿ (ಮತ ಅಳಿಸುವಿಕೆ) ರಿಗ್ಗಿಂಗ್ ನಡೆದಿದೆ ಎಂದು ಕೇರಳ ಕಾಂಗ್ರೆಸ್ ಆರೋಪಿಸಿದೆ. ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ (ಎನ್‌ಡಿಎ) ಗೆದ್ದ 202 ಸ್ಥಾನಗಳಲ್ಲಿ, 128 ಕ್ಷೇತ್ರಗಳಲ್ಲಿ ಗೆಲುವು ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಅಭಿಯಾನದ ಸಮಯದಲ್ಲಿ ನಡೆಸಿದ ಮತದಾರರ ಅಳಿಸುವಿಕೆಯಿಂದ ಉಂಟಾಗಿದೆ ಎಂದು ಪಕ್ಷ ಹೇಳಿಕೊಂಡಿದೆ.

## ಬಿಹಾರ ಚುನಾವಣೆ 'ಆರಂಭದಿಂದಲೂ ನ್ಯಾಯಯುತವಾಗಿರಲಿಲ್ಲ' : ರಾಹುಲ್ ಗಾಂಧಿ

■ವಿಜಯಸಾಕ್ಷಿ ಸುದ್ದಿ, ಬಿಹಾರ

ಬಿಹಾರ ವಿಧಾನಸಭಾ ಚುನಾವಣೆ 'ಆರಂಭದಿಂದಲೂ ನ್ಯಾಯಯುತವಾಗಿರಲಿಲ್ಲ' ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಶುಕ್ರವಾರ (ನವೆಂಬರ್ 14) ಹೇಳಿದ್ದಾರೆ.

ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ನೇತೃತ್ವದ ಇಂಡಿಯಾ ಒಕ್ಕೂಟ ಸೋಲನುಭವಿಸಿದ ಕೆಲ ಗಂಟೆಗಳ ಬಳಿಕ ವಿಪಕ್ಷ ನಾಯಕ ಸಾಮಾಜಿಕ ಮಾಧ್ಯಮದಲ್ಲಿ ಮೇಲಿನ ಹೇಳಿಕೆ ನೀಡಿದ್ದಾರೆ.

ಬಿಹಾರ ವಿಧಾನಸಭಾ ಚುನಾವಣೆಯ ಫಲಿತಾಂಶ ಶುಕ್ರವಾರ (ನವೆಂಬರ್ 14) ಪ್ರಕಟಗೊಂಡಿದೆ. ಎನ್‌ಡಿಎ ಒಕ್ಕೂಟ ಮತ್ತೊಮ್ಮೆ ಅಭೂತಪೂರ್ವ ಗೆಲುವು ದಾಖಲಿಸಿದೆ. ಒಕ್ಕೂಟದ ಪ್ರಮುಖ ಪಕ್ಷ ಬಿಜೆಪಿ 89 ಸ್ಥಾನಗಳನ್ನು ಪಡೆದಿದ್ದು, ನಿತೀಶ್ ಕುಮಾರ್ ನೇತೃತ್ವದ ಜೆಡಿ (ಯು) 85 ಕ್ಷೇತ್ರಗಳಲ್ಲಿ ಗೆಲುವು ದಾಖಲಿಸಿದೆ. ಒಕ್ಕೂಟದ ಮತ್ತೊಂದು ಪಕ್ಷ ಎಲ್‌ಜೆಪಿ (ರಾಮ್ ವಿಲಾಸ್) 19 ಸ್ಥಾನಗಳಲ್ಲಿ ಜಯಭೇರಿ ಬಾರಿಸಿದೆ.

### ರೋಟರಿ ಕ್ಲಬ್ ಗದಗ-ಬೆಟಗೇರಿ, ಇನ್ನರ್ ವ್ಹೀಲ್ ಸಂಸ್ಥೆ ಗದಗ ಸಹಯೋಗ

# ಯಶಸ್ವಿ ಚಿಕಿತ್ಸಾ ಶಿಬಿರ

■ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಕ್ಲಬ್ ಗದಗ-ಬೆಟಗೇರಿ, ಇನ್ನರ್ ವ್ಹೀಲ್ ಸಂಸ್ಥೆ ಗದಗ ಇವರ ಸಹಯೋಗದೊಂದಿಗೆ ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿ ವತಿಯಿಂದ ನೇತ್ರ ತಪಾಸಣೆ ಹಾಗೂ ಕಣ್ಣಿನಲ್ಲಿ ಮಸೂರ ಅಳವಡಿಸುವ ಶಸ್ತ್ರ ಚಿಕಿತ್ಸಾ ಶಿಬಿರನವನ್ನು ಏರ್ಪಡಿಲಾಗಿತ್ತು.

ಶಸ್ತ್ರ ಚಿಕಿತ್ಸಾ ಶಿಬಿರವನ್ನು ದಿ. ಶ್ರೀ ಯಲ್ಲೇಶ ಜಿ. ಹುಕ್ಕೇರಿ ಇವರ ಸ್ಮರಣಾರ್ಥ ಶ್ರೀಮತಿ ಆಶಾ ವಾಯ್. ಹುಕ್ಕೇರಿ ಹಾಗೂ ಮಕ್ಕಳು ಹಾಗೂ ದಿ. ಡಾ. ಹೇಮಂತ ಕೂಡ್ಲೆಪ್ಪ ಪರಡ್ಡಿ ಇವರ ಸ್ಮರಣಾರ್ಥ ಡಾ. ಕೂಡ್ಲೆಪ್ಪ ಹಾಗೂ ಶ್ರೀಮತಿ ಪಾರ್ವತಿ ಕೂಡ್ಲೆಪ್ಪ ಪರಡ್ಡಿ ವಹಿಸಿದ್ದರು. ಸುಮಾರು 24 ಜನ ರೋಗಿಗಳನ್ನು ತಪಾಸಣೆ ಮಾಡಿ ಶಸ್ತ್ರ ಚಿಕಿತ್ಸೆ ಅವಶ್ಯವಿದ್ದ ಹಾಗೂ ಯೋಗ್ಯರಾದ 6 ಜನರಿಗೆ ನೇತ್ರ ಶಸ್ತ್ರ ಚಿಕಿತ್ಸೆಯುನ್ನು




ಕೈಗೊಳ್ಳಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿಯ ಅಧ್ಯಕ್ಷ ಶ್ರೀಧರ ಸುಲ್ತಾನಪೂರ ವಹಿಸಿ, ಸಂಸ್ಥೆಯ ಕಾರ್ಯಕ್ರಮ ಕುರಿತು ಮಾಹಿತಿ ನೀಡಿದರು. ಐ.ಒ.ಎಲ್. ಚೇರಮನ್ ರೊ. ಡಾ.ಶೇಖರ ಡಿ.ಸಜ್ಜನರ, ಇನ್ನರ್ ವ್ಹೀಲ್ ಸಂಸ್ಥೆಯ ಅಧ್ಯಕ್ಷರಾದ ಅಶ್ವಿನಿ ಜಗತಾಪ, ದಾನಿಗಳಾದ ಡಾ. ಕೂಡ್ಲೆಪ್ಪ ಪರಡ್ಡಿ, ಪಾರ್ವತಿ ಪರಡ್ಡಿ, ರೋಟರಿ ಸಂಸ್ಥೆಯ ಅಧ್ಯಕ್ಷ ರೊ. ಡಾ. ರಾಜೇಂದ್ರ ಗಚ್ಚಿನಮಠ, ಆಶಾ ಹುಕ್ಕೇರಿ ವೇದಿಕೆಯಮೇಲೆ ಉಪಸ್ಥಿತರಿದ್ದರು.

ರೋಟರಿ ಸಂಸ್ಥೆ ವೆಲ್‌ಫೇರ್ ಸೊಸೈಟಿಯ ಖಜಾಂಚಿ ರೊ. ಚನ್ನವೀರಪ್ಪ ಹುಣಶಿಕಟ್ಟಿ, ಸದಸ್ಯರಾದ ರೊ. ಡಾ. ಪ್ರದೀಪ ಉಗಲಾಟ, ರೊ. ಡಾ. ಕಮಲಾಕ್ಷಿ ಅಂಗಡಿ, ರೊ. ಅಕ್ಷಯ ವ್ಹಿ.ಶೆಟ್ಟಿ, ರೊ. ವಿಶ್ವನಾಥ ಯಳಮಲಿ, ರೊ. ಪ್ರೀತಿ ಶಿವಪ್ಪನಮಠ, ಡಾ. ವಿನಯ್ ಟಿಕಾರೆ, ರೊ. ಮಹೇಶ ಹಿಂಡಿ, ರೊ. ಶಿವಾಚಾರ್ಯ ಹೊಸಳ್ಳಿಮಠ, ಇನ್ನರ್‌ವ್ಹೀಲ್ ಸಂಸ್ಥೆಯ ಕಾರ್ಯದರ್ಶಿ ಶಿವಲೀಲಾ ಅಕ್ಕಿ ಮುಂತಾದವರು ಉಪಸ್ಥಿತರಿದ್ದರು. ಶಿಬಿರದಲ್ಲಿ ರುದ್ರೇಶ, ನೇತ್ರಾ, ಜ್ಯೋತಿ ದೊಡ್ಡಮನಿ, ದೀಪಾ, ಆನಂದ ಸಿಂಗ್ರಿ ನೇತ್ರಶಸ್ತ್ರ ಚಿಕಿತ್ಸೆ ನಡೆಸಲು ಸಹಾಯ ಮಾಡಿದರು.

ರೋಟರಿ ಸಂಸ್ಥೆಯ ಅಧ್ಯಕ್ಷ ಡಾ. ರಾಜೇಂದ್ರ ಗಚ್ಚಿನಮಠ ಸ್ವಾಗತಿಸಿದರು. ಕಾರ್ಯದರ್ಶಿ ರೊ. ಬಾಲಕೃಷ್ಣ ಕಾಮತ್ ಕಾರ್ಯಕ್ರಮ ನಿರೂಪಿಸಿದರು. ರೋಟರಿ ಸಂಸ್ಥೆಯ ಕಾರ್ಯದರ್ಶಿ ರೊ. ಸುರೇಶ ಕುಂಬಾರ ವಂದಿಸಿದರು. ಸಹಾಯಕರಾದ ರುದ್ರೇಶ ಶಸ್ತ್ರ ಚಿಕಿತ್ಸೆಗೆ ಒಳಗಾದ ರೋಗಿಗಳು ತಮ್ಮ ಕಣ್ಣಿನ ಆರೋಗ್ಯವನ್ನು ಯಾವ ರೀತಿ ಕಾಳಜಿವಹಿಸಬೇಕೆಂದು ತಿಳಿಸಿದರು.

**ಜಿಲ್ಲಾ ಮಟ್ಟದ ಪೋಷಕ-ಶಿಕ್ಷಕರ ಮಹಾಸಭೆಯಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು**

# ಮಕ್ಕಳೆದುರು ಜವಾಬ್ದಾರಿಯುತ ಪಾಲಕರಾಗಿ

**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ಪ್ರಸಕ್ತ ಸಾಲಿನ ಮಕ್ಕಳ ದಿನಾಚರಣೆಯನ್ನು ರಾಜ್ಯ ಸರಕಾರದ ಸೂಚನೆಯಂತೆ ವಿಶೇಷವಾಗಿ ಪೋಷಕರಲ್ಲಿ, ಶಿಕ್ಷಕರಲ್ಲಿ ಜಾಗೃತಿ ಮೂಡಿಸಿ, ಅವರ ಜವಾಬ್ದಾರಿಯನ್ನು ನೆನಪಿಸಲು ಇಂದು ಜಿಲ್ಲೆಯಾದ್ಯಂತ 896 ಶಾಲೆ-ಕಾಲೇಜುಗಳಲ್ಲಿ ಪೋಷಕ-ಶಿಕ್ಷಕರ ಮಹಾಸಭೆಯನ್ನು ಯಶಸ್ವಿಯಾಗಿ ಆಯೋಜಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಶುಕ್ರವಾರ ರಾಯನಾಳ ಗ್ರಾಮದ ಕೆಪಿಎಸ್ ಶಾಲೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆ, ಗ್ರಾಮ ಪಂಚಾಯಿತಿ ರಾಯನಾಳ ಹಾಗೂ ಕರ್ನಾಟಕ ಪಬ್ಲಿಕ್ ಶಾಲೆ ರಾಯನಾಳ, ಪಿಯು ಕಾಲೇಜು ಇವುಗಳ ಸಹಯೋಗದಲ್ಲಿ ಮಕ್ಕಳ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ಪೋಷಕ-ಶಿಕ್ಷಕರ ಮಹಾಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳಲ್ಲಿ ಉತ್ತಮ ವ್ಯಕ್ತಿತ್ವ ಬೆಳೆಸುವಲ್ಲಿ ಪೋಷಕರ ಮತ್ತು ಶಿಕ್ಷಕರ ಪಾತ್ರ ಮುಖ್ಯವಾಗಿದೆ. ಮಕ್ಕಳಲ್ಲಿ ಒಳ್ಳೆಯ ಸಂಸ್ಕಾರ ರೂಢಿಗತವಾಗಲು ಪಾಲಕರು ಮಕ್ಕಳ ಮುಂದೆ ಪಾಲಕರಾಗಿರಬೇಕು. ಮಕ್ಕಳ ಸಮಗ್ರ ಬೆಳವಣಿಗೆಗೆ ದೈಹಿಕ ಮತ್ತು ಬೌದ್ಧಿಕ ಆರೋಗ್ಯ ಮುಖ್ಯವಾಗಿದೆ. ಶಿಕ್ಷಕರು ಮತ್ತು ಪೋಷಕರು ಜವಾಬ್ದಾರಿಯುತವಾಗಿ ವರ್ತಿಸಬೇಕು ಎಂದು ಹೇಳಿದರು.

ಧಾರವಾಡ ಜಿಲ್ಲೆಯನ್ನು ವಿದ್ಯಾ ಕಾಶಿ ಎಂದು ಕರೆಯುತ್ತಾರೆ. ಜಿಲ್ಲೆಯಲ್ಲಿ ಗುಣಮಟ್ಟದ ಶಿಕ್ಷಣಕ್ಕೆ ಒತ್ತು ನೀಡಲಾಗಿದೆ. ಪ್ರತಿದಿನ ಮಕ್ಕಳ ಜೊತೆ ಬೆರೆಯುವ ಅವಕಾಶ ಶಿಕ್ಷಕರಿಗೆ ಮಾತ್ರ ಇದೆ. ಮಕ್ಕಳ ಜೊತೆ ಬೆರೆಯುವ ವೃತ್ತಿ ಶಿಕ್ಷಕ ವೃತ್ತಿಯಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಹೇಳಿದರು.

ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ್ ಪಾಟೀಲ್ ಮಾತನಾಡಿ,



ಮಕ್ಕಳ ಬಗ್ಗೆ ಪೋಷಕರ ಜವಾಬ್ದಾರಿ ತಿಳಿಸುವ ಕಾರ್ಯಕ್ರಮ ಆಯೋಜನೆ ಮಾಡಿರುವುದು ಸಂತಸ ತಂದಿದೆ. ಮಕ್ಕಳು ಉತ್ತಮ ನಾಗರಿಕರಾಗುವತ್ತ ಗಮನ ಹರಿಸಬೇಕು. ಮಕ್ಕಳಿಗೆ ಪೋಷಕರು ಮಾದರಿಯಾಗಿರಬೇಕು. ಮಕ್ಕಳ ದಿನನಿತ್ಯದ ಪ್ರಗತಿಯನ್ನು ಪೋಷಕರು ಗಮನಿಸುತ್ತಿರಬೇಕು. ಮಕ್ಕಳಿಗೆ ಆಸಕ್ತಿ ಇರುವ ಕ್ಷೇತ್ರಗಳಲ್ಲಿ ಸಾಧನೆ ಮಾಡಲು ಪೋಷಕರು ಅವಕಾಶ ಮಾಡಿಕೊಡಬೇಕು ಎಂದರಲ್ಲದೆ, ಮಕ್ಕಳು ಗುರಿಯ ಜೊತೆಗೆ ಮೌಲ್ಯವನ್ನು ರೂಢಿಸಿಕೊಳ್ಳಬೇಕು ಎಂದರು.

ಹುಬ್ಬಳ್ಳಿ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ಉಮೇಶ್ ಬೊಮ್ಮಕನವರ್ ಪ್ರಾಸ್ತಾವಿಕವಾಗಿ ಮಾತನಾಡಿ, ಮಕ್ಕಳ ದಿನಾಚರಣೆ ಅಂಗವಾಗಿ ಮಕ್ಕಳಿಗೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಸರ್ಕಾರದ ಜೊತೆಗೆ ಸಮುದಾಯ ಸಹಭಾಗಿದಾರರು ಕೈಜೋಡಿಸಿದರೆ ಸಾಕಷ್ಟು ಬದಲಾವಣೆ ತರಬಹುದು ಎಂದು ತಿಳಿಸಿದರು.

ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯ, ವಕೀಲರಾದ ನೂರ್ ಜಹಾನ್ ಕಿಲ್ಲೇದಾರ್ ಅವರು ಮಕ್ಕಳ ಹಕ್ಕುಗಳು ಮತ್ತು ರಕ್ಷಣೆ ಹಾಗೂ ಗೋಕುಲದ ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರಾಚಾರ್ಯ ಎಫ್.ಬಿ. ಸೊರಟೂರ್ ಶಿಕ್ಷಣದಲ್ಲಿ ಭಾಗಿದಾರರ ಪಾತ್ರ ವಿಷಯದ ಕುರಿತು ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಹುಬ್ಬಳ್ಳಿ ಗ್ರಾಮೀಣ ತಹಸೀಲ್ದಾರ ಜೆ.ಬಿ. ಮಜ್ಜಗಿ, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಎಸ್.ಎಸ್. ಕೆಳದಿಮಠ, ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕಿ ತೇಜಸ್ವಿನಿ ನಾರಾಯಣಕರ, ರಾಯನಾಳ ಗ್ರಾ.ಪಂ ಅಧ್ಯಕ್ಷ ರುದ್ರಪ್ಪ ಮೇಟಿ, ಉಪಾಧ್ಯಕ್ಷ ಗಂಗಮ್ಮ ಮಾರಡಗಿ, ಜಿ.ಪಂ ಕೆಡಿಪಿ ಸದಸ್ಯರಾದ ನಾಗರಾಜ ಹೆಗ್ಗಣ್ಣವರ, ಹುಬ್ಬಳ್ಳಿ ಗ್ರಾಮೀಣ ಕ್ಷೇತ್ರ ಸಮನ್ವಯಾಧಿಕಾರಿ ಸಂತೋಷ ದಂಡಗಲ್, ಕೆಪಿಎಸ್ ಶಾಲೆಯ ಪ್ರಾಚಾರ್ಯ ಸಂಜೀವ್‌ಕುಮಾರ್ ಸೇರಿದಂತೆ ಗ್ರಾ.ಪಂ ಸದಸ್ಯರು, ಶಿಕ್ಷಕರು, ವಿದ್ಯಾರ್ಥಿಗಳು, ಗ್ರಾಮಸ್ಥರು, ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

> ಮಕ್ಕಳು ತಂದೆ-ತಾಯಿಗಳ ಮಾತುಗಳನ್ನು ಪಾಲಿಸಬೇಕು. ಮಕ್ಕಳು ಸಕಾರಾತ್ಮಕ ಚಿಂತನೆಗಳನ್ನು ಬೆಳೆಸಿಕೊಳ್ಳಬೇಕಾಗುತ್ತದೆ. ಉತ್ತಮ ಸಂಸ್ಕಾರವನ್ನು ಬೆಳೆಸಿಕೊಳ್ಳುವತ್ತ ಗಮನಹರಿಸಬೇಕು. ನಮ್ಮ ಸಂಸ್ಕೃತಿಯನ್ನು ಮಕ್ಕಳಿಗೆ ತಿಳಿಯಪಡಿಸಬೇಕಿದೆ. ಮಕ್ಕಳನ್ನು ಸ್ನೇಹಿತರಂತೆ ಕಾಣಬೇಕು. ಪರಸ್ಪರ ನಂಬಿಕೆಯನ್ನು ಉಳಿಸಿಕೊಳ್ಳಬೇಕು. ಮಕ್ಕಳ ಸಮಸ್ಯೆಗಳಿಗೆ ಪೋಷಕರು ಮೊದಲು ಕಿವಿಗೊಡಬೇಕು. ಮಕ್ಕಳ ಮೇಲೆ ನಾವು ನಂಬಿಕೆಯನ್ನು ಹೊಂದಿರಬೇಕು. ಮಗುವಿನ ಸಮಗ್ರ ಅಭಿವೃದ್ಧಿಗೆ ಒತ್ತು ನೀಡಬೇಕು ಎಂದು ಡಿಸಿ ದಿವ್ಯ ಪ್ರಭು ಕಿವಿಮಾತು ಹೇಳಿದರು.

## ವಿಕಲಚೇತನ ಮಕ್ಕಳಿಗೆ ಬೇಕು ಪ್ರೀತಿ-ಪ್ರೋತ್ಸಾಹ




**■ವಿಜಯಸಾಕ್ಷಿ ಸುದ್ದಿ, ಗದಗ**

ವಿಕಲಚೇತನ ಹಾಗೂ ಬುದ್ಧಿಮಾಂದ್ಯ ಮಕ್ಕಳನ್ನು ಅನುಕಂಪದ ಬದಲು ಪ್ರೀತಿಯಿಂದ ಕಂಡು ಅವರನ್ನು ಪ್ರೋತ್ಸಾಹಿಸಬೇಕಿದೆ ಎಂದು ಗದಗ ಐಎಂಎ ಅಧ್ಯಕ್ಷ ಡಾ. ಶ್ರೀಧರ ವ್ಹಿ.ಕುರಡಗಿ ಹೇಳಿದರು.

ಅವರು ಶುಕ್ರವಾರ ನಗರದ ಅರುಣೋದಯ ವಿಶೇಷ ಅಗತ್ಯತೆಯುಳ್ಳ ಮಕ್ಕಳ ಶಾಲೆಯಲ್ಲಿ ಮಕ್ಕಳ ದಿನಾಚರಣೆ ಅಂಗವಾಗಿ ಗದಗ ಐಎಂಎದಿಂದ ದೇಣಿಗೆಯಾಗಿ ನೀಡಲಾದ ವಿಕಲಚೇತನ ಮಕ್ಕಳಿಗೆ ಅನುಕೂಲಕ್ಕಾಗಿ ತಯಾರಿಸಲಾದ ಪ್ಯಾರಲಲ್ ಬಾರ್‌ಗಳನ್ನು ಉದ್ಘಾಟಿಸಿ ಮಾತನಾಡಿದರು.

ವಿಕಲಚೇತನ ಹಾಗೂ ಬುದ್ಧಿಮಾಂದ್ಯ ಮಕ್ಕಳಲ್ಲಿ ವಿಶೇಷವಾದ ಪ್ರತಿಭೆಯೂ ಅಡಕವಾಗಿರುತ್ತದೆ. ಅಂತಹ ಮಕ್ಕಳನ್ನು ಪ್ರೋತ್ಸಾಹಿಸುವ ಮೂಲಕ ಅವರನ್ನು ಸಾಧನೆಯ ಸನ್ಮಾರ್ಗದೆಡೆಗೆ ಮುನ್ನಡೆಸಲು ಪಾಲಕರು, ಶಿಕ್ಷಕರು ಹಾಗೂ ಪ್ರಜ್ಞಾವಂತರು ಪ್ರೋತ್ಸಾಹಿಸಬೇಕು. ಜೊತೆಗೆ ಇಂತಹ ಮಕ್ಕಳಿಗೆ ಸಂಘ-ಸಂಸ್ಥೆಗಳು ಸಾಧ್ಯವಾದಷ್ಟು ಸಹಾಯ-ಸಹಕಾರವನ್ನು ನೀಡಬೇಕೆಂದರು.

ವೇದಿಕೆಯ ಮೇಲೆ ಐಎಂಎ ಲೇಡೀಸ್ ವಿಂಗ್ ಅಧ್ಯಕ್ಷೆ ಡಾ. ಸುನಿತಾ ಎಸ್.ಕುರಡಗಿ, ಡಾ. ರಾಹುಲ್ ಶಿರೋಳ, ಡಾ. ಜಯರಾಜ ಪಾಟೀಲ, ಡಾ. ರಾಧಿಕಾ ಕುಲಕರ್ಣಿ, ಡಾ. ಉದಯ ಕುಲಕರ್ಣಿ, ಡಾ. ಪ್ರಮೋದ, ಡಾ. ಅನುಪಮಾ ಪಾಟೀಲ, ಡಾ. ತುಕಾರಾಮ ಸೂರಿ ಹಾಗೂ ಶಾಲೆಯ ಆಡಳಿತ ಮಂಡಳಿಯ ಉಪಾಧ್ಯಕ್ಷ ಲುಕ್ಕಣಸಾ ರಾಜೋಳಿ, ಕಾರ್ಯದರ್ಶಿ ಜಯರಾಜ ಮುಳಗುಂದ ಉಪಸ್ಥಿತರಿದ್ದರು.

ಮಕ್ಕಳು ಸಂಭ್ರಮದಿಂದ ನೃತ್ಯ, ಹಾಡು ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಪ್ರಸ್ತುತಪಡಿಸುವ ಮೂಲಕ ತಮ್ಮ ಪ್ರತಿಭೆ ಮತ್ತು ಉತ್ಸಾಹವನ್ನು ಪ್ರದರ್ಶಿಸಿ ಕಾರ್ಯಕ್ರಮದ ಸೊಬಗನ್ನು ಹೆಚ್ಚಿಸಿದರು. ಶಾಲೆಯ ಮುಖ್ಯೋಪಾಧ್ಯಾಯ ಮಲ್ಲಪ್ಪ ಹಕ್ಕಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ಕಾರ್ಯಕ್ರಮದಲ್ಲಿ ಆಡಳಿತ ಮಂಡಳಿಯ ಸದಸ್ಯರಾದ ಡಾ. ಉಮೇಶ ಹಾದಿ, ಬಸವರಾಜ ಪಟ್ಟಣಶೆಟ್ಟಿ ಸೇರಿದಂತೆ ಶಾಲೆಯ ಶಿಕ್ಷಕ-ಶಿಕ್ಷಕಿಯರು, ವಿದ್ಯಾರ್ಥಿಗಳು, ಐಎಂಎ ಸದಸ್ಯರು ಉಪಸ್ಥಿತರಿದ್ದರು.

## ಪತ್ರಕರ್ತರ ನೋವು-ನಲಿವಿಗೆ ಜೊತೆಯಾಗೋಣ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಗ್ರಾಮೀಣ ಪತ್ರಕರ್ತರ ಸಮಸ್ಯೆಗಳ ಪರಿಹಾರಕ್ಕೆ ಮೊದಲ ಆದ್ಯತೆ ನೀಡಲು ಶ್ರಮಿಸುವೆ ಎಂದು ಕಾರ್ಯನಿರತ ಪತ್ರಕರ್ತರ ಸಂಘದ ನೂತನ ಅಧ್ಯಕ್ಷ ರಾಜು ಹೆಬ್ಬಳ್ಳಿ ಹೇಳಿದರು.

ಅವರು ಮುಳಗುಂದ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಮುಳಗುಂದ ಕಾರ್ಯನಿರತ ಪತ್ರಕರ್ತ ಸಂಘದಿಂದ ಸನ್ಮಾನ ಸ್ವೀಕರಿಸಿ ಮಾತನಾಡಿ, ಪ್ರತಿಯೊಬ್ಬ ಪತ್ರಕರ್ತರು ಗ್ರಾಮೀಣ ಭಾಗದಿಂದ ಬಂದವರು. ಇಂದು ಪತ್ರಕರ್ತರು ಸಾಕಷ್ಟು ಸಮಸ್ಯೆಗಳನ್ನು ಎದುರಿಸುತ್ತಿದ್ದು, ಅವರ ನೋವು-ನಲಿವಿನಲ್ಲಿ ನಾವೆಲ್ಲರೂ ಒಗ್ಗಟ್ಟಾಗಿ ಅವರ ಜೊತೆ ಇರುತ್ತೇವೆ ಎಂದರು.

ಉಪಾಧ್ಯಕ್ಷ ಪ್ರಭಯ್ಯ ಅರವಟಗಿಮಠ ಮಾತನಾಡಿ, ಇಂದು ಗ್ರಾಮೀಣ ಭಾಗದ ಪತ್ರಕರ್ತರು ಸಾಕಷ್ಟು ಸವಾಲುಗಳನ್ನು ಎದುರಿಸುತ್ತಿರುವ ನಿತ್ಯ ಕಾಯಕ ಯೋಗಿಗಳು. ಅವರ ಅಭಿವೃದ್ಧಿಗಾಗಿ ಸಂಘ ಎಂದಿಗೂ ಅವರ ಜೊತೆ ಇರುತ್ತದೆ ಎಂದರು.

ಪತ್ರಕರ್ತರಾದ ಶಿವಾನಂದ ಹಿರೇಮಠ, ವಿರೂಪಾಕ್ಷಪ್ಪ ಕಣವಿ, ಶರಣು ದೊಡ್ಡೂರ, ಅನಿಲ ತೆಂಬದಮನಿ, ಅರುಣ ಹಿರೇಮಠ, ಚಂದ್ರು ಕುಸ್ಲಾಪೂರ ಅವರನ್ನು ಸನ್ಮಾನಿಸಲಾಯಿತು. ಚಂದ್ರು ಭಜಂತ್ರಿ, ಮಹೇಶ ನೀಲಗುಂದ, ರಾಜು ಪಾಟೀಲ, ಬಿ.ಎಲ್. ಜಾಧವ, ಮಹೇಶ ಛಬ್ಬಿ, ವಿ.ಡಿ. ಸಿದ್ದನಗೌಡರ ಇದ್ದರು.

## ಪಕ್ಷ ವಿರೋಧಿ ಚಟುವಟಿಕೆ ಆರೋಪ; ಕೇಂದ್ರದ ಮಾಜಿ ಸಚಿವ ಸೇರಿ ಮೂವರ ಉಚ್ಚಾಟನೆ

**■ವಿಜಯಸಾಕ್ಷಿ ಸುದ್ದಿ, ಬಿಹಾರ**

ಬಿಹಾರ ಚುನಾವಣೆಯಲ್ಲಿ ಎನ್.ಡಿ.ಎ ಬಹುಮತಗಳಿಂದ ಗೆದ್ದ ನಂತರ ಬಿಜೆಪಿ, ಪಕ್ಷವಿರೋಧಿ ಆರೋಪದಲ್ಲಿ ಮಾಜಿ ಕೇಂದ್ರ ಸಚಿವ ಆರ್.ಕೆ. ಸಿಂಗ್ ಅವರನ್ನು ಆರು ವರ್ಷಗಳ ಕಾಲ ಪಕ್ಷದಿಂದ ಉಚ್ಚಾಟನೆ ಮಾಡಿದೆ. ಆಂತರಿಕ ಭಿನ್ನಾಭಿಪ್ರಾಯವನ್ನು ಹತ್ತಿಕ್ಕುವ ಪ್ರಯತ್ನಗಳ ನಡುವೆ, ಈ ಕ್ರಮದಲ್ಲಿ ಇತರ ಬಿಹಾರ ನಾಯಕರ ಅಮಾನತು ಕೂಡ ಸೇರಿದೆ.

ಚುನಾವಣೆಯ ನಂತರ ಬಂಡುಕೋರರ ವಿರುದ್ಧ ವ್ಯಾಪಕ ಕ್ರಮ ಕೈಗೊಳ್ಳುವ ಮೂಲಕ, ಭಾರತೀಯ ಜನತಾ ಪಕ್ಷವು ಶನಿವಾರ ಮಾಜಿ ಕೇಂದ್ರ ವಿದ್ಯುತ್ ಸಚಿವ ಮತ್ತು ಮಾಜಿ ಆರಾ ಸಂಸದ ಆರ್.ಕೆ. ಸಿಂಗ್ ಅವರನ್ನು "ಪಕ್ಷ ವಿರೋಧಿ ಚಟುವಟಿಕೆಗಳು" ಮತ್ತು ಸಾಂಸ್ಥಿಕ ಶಿಸ್ತಿನ ಪದೇ ಪದೇ ಉಲ್ಲಂಘನೆ ಮಾಡಿರುವ ಆರೋಪದ ಮೇಲೆ ಆರು ವರ್ಷಗಳ ಕಾಲ ಉಚ್ಚಾಟಿಸಿದೆ.

**ನರೇಗಲ್ಲ ಹಿರೇಮಠದ ಜಾತ್ರಾ ಮಹೋತ್ಸವ | ಮಲ್ಲಿಕಾರ್ಜುನ ಶ್ರೀಗಳ ಸಾನ್ನಿಧ್ಯದಲ್ಲಿ ಮಹಿಳಾಗೋಷ್ಠಿ**

## ತಾಯಂದಿರು ಪುರುಷರಿಗಿಂತ ಹೆಚ್ಚು ಸಮರ್ಥರು

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಮಹಿಳೆಯರಲ್ಲಿ ಅಪಾರ ಶಕ್ತಿಯಿದ್ದು, ಅವರು ಸುಸಂಸ್ಕೃತರಾಗುವದರೊಂದಿಗೆ ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಿದರೆ ಸಮಾಜದ ಶ್ರೇಯೋಭಿವೃದ್ಧಿ ಸಾಧ್ಯ ಎಂದು ಗಜೇಂದ್ರಗಡ ಅಕ್ಕನ ಬಳಗದ ಅಧ್ಯಕ್ಷೆ ಸಂಯುಕ್ತಾ ಬಂಡಿ ಅಭಿಪ್ರಾಯಪಟ್ಟರು.

ಪಟ್ಟಣದ ಹಿರೇಮಠ ಜಾತ್ರಾಮಹೋತ್ಸವದ ಅಂಗವಾಗಿ ಶುಕ್ರವಾರ ನಡೆದ ಮಹಿಳಾಗೋಷ್ಠಿ ಹಾಗೂ ಶ್ರೀ ಅನ್ನಪೂರ್ಣೇಶ್ವರಿ ಮಹಿಳಾ ಸಂಘದ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ತಾಯಂದಿರು ಪುರುಷರಿಗಿಂತ ಹೆಚ್ಚಿನ ಸಾಮರ್ಥ್ಯ ಹೊಂದಿದ್ದು, ಅವರು ಶಾಂತವಾಗಿರಬೇಕು. ಮಹಿಳೆಯರು ಮನಸ್ಸು ಮಾಡಿದರೆ ಕುಟುಂಬದೊಂದಿಗೆ ಇಡೀ ನಾಡನ್ನೇ ಆಳಬಹುದು.



ಹಾಗಾಗಿ ಮಹಿಳೆಯರು ನಿತ್ಯ 10 ನಿಮಿಷ ಧ್ಯಾನ-ಪೂಜೆಯಲ್ಲಿ ತಮ್ಮನ್ನು ತೊಡಗಿಸಿಕೊಂಡಾಗ ನೆಮ್ಮದಿ ಪ್ರಾಪ್ತಿಯಾಗುತ್ತದೆ. ಮುತ್ತೈದೆಯರ ಮಾಂಗಲ್ಯ, ಬಳೆ, ಹೂ, ಕುಂಕುಮ, ಕಾಲುಂಗುರಗಳು ವೀರಶೈವ ಪಂಚಪೀಠದ ಸಂಕೇತಗಳಾಗಿದ್ದು, ಜಗದ್ಗುರುಗಳ ಆಶೀರ್ವಾದ ಸದಾ ಮಹಿಳೆಯರ ಮೇಲಿರುತ್ತದೆ ಎಂದು ಹೇಳಿದರು.

ನರೇಗಲ್ಲ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷೆ ಮಂಜುಳಾ ಈ.ರೇವಡಿ ಮಾತನಾಡಿ, ಹಿರೇಮಠ ಪೂಜ್ಯರನ್ನು ಗುರುಗಳಾಗಿ ಪಡೆದ ನಾವೇ ಧನ್ಯರು. ಅವರು ಆಶೀರ್ವಾದದಿಂದ ಭಕ್ತರು ಮುನ್ನಡೆದರೆ ಪಟ್ಟಣದ ಅಭಿವೃದ್ಧಿ ಸಾಧ್ಯ ಎಂದರು.

ಶ್ರೀ ವೀರಭದ್ರೇಶ್ವರ ಚರಿತಾಮೃತ ದಯಪಾಲಿಸಿದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯ ಮಹಾಸ್ವಾಮಿಗಳು, ವಿಷ್ಣುವಿನ ನರಸಿಂಹ ಅವತಾರವನ್ನು ಶಾಂತಗೊಳಿಸಲು ವೀರಭದ್ರ ದೇವರು ತಾಳಿದ ಶರಭಸಾಳ್ವ ಅವರತರಾದ ಕುರಿತು ವಿವರಿಸಿದರು.

ಇದೇ ಸಂದರ್ಭದಲ್ಲಿ ಶುಕ್ರವಾರ ನಿಧನರಾದ ಪದ್ಮಶ್ರೀ ಸಾಲುಮರದ ತಿಮ್ಮಕ್ಕ ಅವರಿಗೆ ಮೌನಾಚರಣೆ ಮೂಲಕ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಅನ್ನಪೂರ್ಣೇಶ್ವರಿ ಮಹಿಳಾ ಸಂಘದ ಅಧ್ಯಕ್ಷೆ ಕಸ್ತೂರಿಬಾಯಿ ಕೆ.ಧನ್ನೂರು, ಪ.ಪಂ ಸದಸ್ಯೆ ಜ್ಯೋತಿ ಪಾಯಪ್ಪಗೌಡ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು. ಅಕ್ಕಮ್ಮ ಬೆಟಗೇರಿ ಸ್ವಾಗತಿಸಿದರು. ಮುಖ್ಯ ಶಿಕ್ಷಕಿ ನಿರ್ಮಲಾ ಹಿರೇಮಠ ನಿರೂಪಿಸಿದರು. ಮಹಿಳಾ ಸಂಘದ ಮಾತೆಯರು ಸಂಗೀತ ಸೇವೆ ಸಲ್ಲಿಸಿದರು.

## ಸಂಕಷ್ಟದಲ್ಲಿರುವ ರೈತರಿಗೆ ನ್ಯಾಯ ಕೊಡಿಸಲು ಮುಂದಾಗಿ

▸▸ಮೊದಲನೇ ಪುಟದಿಂದ

ನುಣುಚಿಕೊಳ್ಳದೇ ಖರೀದಿ ಕೇಂದ್ರ ಸ್ಥಾಪಿಸಬೇಕು. ಸಂಬಂಧಪಟ್ಟವರು ಸ್ಪಂದಿಸದಿದ್ದರೆ ರೈತರು ರಾಜ್ಯ ಹೆದ್ದಾರಿ ಬಂದ್ ಮಾಡಿ ಹೋರಾಟಕ್ಕಿಳಿಯ ಬೇಕಾಗುತ್ತದೆ ಎಂದು ಸರಕಾರಕ್ಕೆ ಪರೋಕ್ಷ ಎಚ್ಚರಿಕೆ ನೀಡಿದರು.

ಕೃಷಿಕ ಸಮಾಜದ ರಾಜ್ಯಾಧ್ಯಕ್ಷ ಮಾಣಿಕ್ಯ ಚಿಲ್ಲೂರ ಮಾತನಾಡಿ, ಬೆಂಬಲ ಬೆಲೆ ಘೋಷಣೆಗೆ ಸೀಮಿತವಾಗಬಾರದು. ಈ ವಿಷಯದಲ್ಲಿ ರೈತರ ಹೆಸರಿನಲ್ಲಿ ಅಧಿಕಾರ ಹಿಡಿಯುವ ಕೇಂದ್ರ ಮತ್ತು ರಾಜ್ಯ ಸರ್ಕಾರ ಸಮನ್ವಯತೆಯಿಂದ ಕಾರ್ಯ ನಿರ್ವಹಿಸಬೇಕು. ಬೆಂಬಲ ಬೆಲೆ ಖರೀದಿ ಕೇಂದ್ರಗಳು ವರ್ಷದುದ್ದಕ್ಕೂ ಕಾರ್ಯ ನಿರ್ವಹಿಸಬೇಕು. ಕಬ್ಬು, ಭತ್ತ, ಅಡಿಕೆ, ಕಾಫಿ ಬೆಳೆಗಾರರ ಹೋರಾಟಕ್ಕೆ ಮಣಿಯುವ ಸರ್ಕಾರಗಳು ಉತ್ತರ ಕರ್ನಾಟಕ ಭಾಗದ ಆಹಾರ ಧಾನ್ಯ ಬೆಳೆಯುವ ರೈತರ ಬಗ್ಗೆ ಏಕೆ ನಿರ್ಲಕ್ಷ ತೆ-ೂೀರುತ್ತೀರಿ ಎಂದರು.

ಮಧ್ಯಾಹ್ನ ಧರಣಿ ಸ್ಥಳಕ್ಕೆ ಆಗಮಿಸಿದ ತಹಸೀಲ್ದಾರ ರಾಘವೇಂದ್ರ ಕೆ, ತಮ್ಮ ಬೇಡಿಕೆಗಳು ಸರ್ಕಾರದ ಹಂತದ್ದಾಗಿವೆ. ಈ ಬಗ್ಗೆ ಈಗಾಗಲೇ ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮಾಹಿತಿ ಸಲ್ಲಿಸಲಾಗಿದೆ. ಇನ್ನಷ್ಟು ಕಾಲಾವಾಶ ನೀಡಿ ಧರಣಿಯಿಂದ ಹಿಂದೆ ಸರಿಯುವಂತೆ ಮನವಿ ಮಾಡಿದರು. ಇದಕ್ಕೆ ಧರಣಿ ನಿರತ ರೈತರು ಕಿಂಚಿತ್ತೂ ಒಪ್ಪದ್ದರಿಂದ ತಹಸೀಲ್ದಾರರು ವಾಪಸ್ ಹೋದರು.

ರೈತರ ಹೋರಾಟದಲ್ಲಿ ಜಿ.ಪಂ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ, ಎಂ.ಎಸ್. ದೊಡ್ಡಗೌಡ್ರ, ರಾಜಶೇಖರ ಖಾತರಕಿ, ಬಸಣ್ಣ ಬೆಂಡಿಗೇರಿ, ಸೋಮಣ್ಣ ಡಾಣಗಲ್, ಭರಮಣ್ಣ ರೊಟ್ಟಿಗವಾಡ, ಅಶೋಕ ಬಟಗುರ್ಕಿ, ಪೂರ್ಣಜಿ ಖರಾಟೆ, ಎಂ.ಆಯ್. ಮುಳಗುಂದ, ರಾಮಣ್ಣ ಗೌರಿ, ಲೋಕೇಶ ಸುತಾರ, ಎಂ.ಬಿ. ಪೂಜಾರ, ಲೋಕೇಶ ಜಾಲವಾಡಗಿ, ಸುರೇಶ ಹಟ್ಟಿ, ನಿಂಬಣ್ಣ ಮಡಿವಾಳರ, ಅಜಯ ಕರಿಗೌಡ್ರ, ಚಂದ್ರು ತಳವಾರ, ಬಸವರಾಜ ಜಾಲಗಾರ, ಗುರುಪ್ಪ ಮುಳಗುಂದ, ಶಿವಾನಂದ ಲಿಂಗಶೆಟ್ಟಿ, ಮಂಜುನಾಥ ಬಟ್ಟೂರ, ಕಾಶಪ್ಪ ಮುಳಗುಂದ, ಶೇಖರಗೌಡ ಕೊರಡೂರ, ನಾಗರಾಜ ದೊಡ್ಡಮನಿ, ಮೌನೇಶ ದೊಡ್ಡಮನಿ, ಶಂಕರ ಬ್ಯಾಡಗಿ, ಶಿವಾನಂದ ದೇಸಾಯಿ, ಶೇಖರಗೌಡ ಕರಿಗೌಡ್ರ, ಮಂಜನಗೌಡ ಕೆಂಚನಗೌಡ್ರ, ಅಮರಪ್ಪ ಗುಡಗುಂಟಿ, ಶಿವಪುತ್ರಪ್ಪ ತಾರಿಕೊಪ್ಪ, ರಮೇಶ ಕೋಳಿವಾಡ, ಮಂಜುಳಾ ಹಿರಗುಪ್ಪನವರ, ನೀಲಮ್ಮ ಕಂಬಳಿ, ಕಸ್ತೂರೆವ್ವ ಅಕ್ಕಿವಾಟೆ, ನಿರ್ಮಲಾ ಹಣಸಿಯವರ, ನೀಲಮ್ಮ ಇಟಗಿ ಸೇರಿ ತಾಲೂಕಾ ಸಮಗ್ರ ರೈತ ಹೋರಾಟ ಸಮಿತಿ, ಅಖಿಲ ಕರ್ನಾಟಕ ರಾಜ್ಯ ಕಿಸಾನ್ ಜಾಗೃತಿ ಸಂಘ, ಭಾರತೀಯ ಕಿಸಾನ್ ಸಂಘ, ರಾಜ್ಯ ರೈತ ಸಂಘ, ಕೃಷಿಕ ಸಮಾಜ (ನವದೆಹಲಿ), ಜಯಕರ್ನಾಟಕ ರಾಜ್ಯ ರೈತ ಸಂಘ, ಹಸಿರು ಸೇನೆ, ಕರವೇ (ನಾರಾಯಣಗೌಡ ಬಣ), ಜನಪರ ಅಭಿವೃದ್ಧಿ ವೇದಿಕೆ, ಕೃಷಿ ಪರಿಕರ ಮಾರಾಟಗಾರರು ಸೇರಿದಂತೆ ನೂರಾರು ರೈತರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಬಿಹಾರದ ಜನತೆ ಮೋದಿ ಆಡಳಿತವನ್ನು ಮೆಚ್ಚಿದ್ದಾರೆ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಬಿಹಾರದಲ್ಲಿ ನಡೆದ ವಿಧಾನಸಭಾ ಚುನಾವಣೆಯಲ್ಲಿ ಅಲ್ಲಿನ ಜನತೆ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ಆಡಳಿತವನ್ನು ಮೆಚ್ಚಿ ಎನ್‌ಡಿಎ ಮೈತ್ರಿಯನ್ನು ಭಾರೀ ಬಹುಮತದಿಂದ ಆರಿಸಿದ್ದಾರೆ. ವಿಪಕ್ಷಗಳು ಸಾರಿ ಹೇಳಿದ ಮತಗಳ್ಳತನದ ವಿಚಾರವನ್ನು ಸಾರಾಸಗಟಾಗಿ ತಿರಸ್ಕರಿಸಿರುವ ಅಲ್ಲಿನ ಮತದಾರರು ವಿಪಕ್ಷಗಳಿಗೆ ಮುಟ್ಟಿ ನೋಡಿಕೊಳ್ಳುವಂತಹ ಪೆಟ್ಟನ್ನು ನೀಡಿದ್ದಾರೆ ಎಂದು ಚನ್ನು ಪಾಟೀಲ ಫೌಂಡೇಷನ್ ಸಂಸ್ಥಾಪಕ ಉಮೇಶ ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟ ಈ ಪರಿಯ ಗೆಲುವು ಸಾಧಿಸಲು ಮೋದಿಯವರ ದೂರದೃಷ್ಟಿತ್ವ, ಅಭಿವೃದ್ಧಿ ಮಂತ್ರಗಳೇ ಕಾರಣ. ಜೊತೆ-ಗೆ ಮುಖ್ಯಮಂತ್ರಿಯಾಗಿ ನಿತೇಶಕುಮಾರ ಅವರ ಭ್ರಷ್ಟಾಚಾರ ರಹಿತ ಆಡಳಿತವೂ ಕಾರಣ. ಇದನ್ನರಿಯವ ವಿಪಕ್ಷಗಳು ಇಲ್ಲಸಲ್ಲದ ಆರೋಪಗಳನ್ನು ಮಾಡುತ್ತ ತಮ್ಮ ಘನತೆಯನ್ನು ತಾವೇ ಕಡಿಮೆ ಮಾಡಿಕೊಳ್ಳುತ್ತಿವೆ ಎಂದು ಪಾಟೀಲ ಹೇಳಿದ್ದಾರೆ.


ದೇಶವಿಂದು ಮೋದಿಯವರ ನಾಯಕತ್ವದಲ್ಲಿ ನೂತನ ದಿಕ್ಕಿನಲ್ಲಿ ಬೆಳೆಯುತ್ತಿದೆ. ಜನತೆ ಅಭಿವೃದ್ಧಿಪರ ಆಡಳಿತ ಬಯಸುತ್ತಾರೆ ಎನ್ನುವುದಕ್ಕೆ ಇದು ಸ್ಪಷ್ಟ ನಿರ್ದೇಶನವಾಗಿದ್ದು, ಈ ಗೆಲುವು ಅನೇಕ ಯುವಕರಿಗೆ ಉತ್ಸಾಹ, ರೈತರಿಗೆ ಹೊಸ ಭರವಸೆಯನ್ನು ತುಂಬಿದೆ ಎಂದು ಹೇಳಿರುವ ಪಾಟೀಲ, ಬಹುಮತ ಪಡೆದ ಎನ್‌ಡಿಎಗೆ ಅಭಿನಂದನೆ ಸಲ್ಲಿಸುವುದಾಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗದಗ ತಂಡಕ್ಕೆ ಭರ್ಜರಿ ಜಯ

**■ವಿಜಯಸಾಕ್ಷಿ ಸುದ್ದಿ, ಗದಗ**

ಕೆ.ಎಸ್.ಸಿ.ಎ ಆಶ್ರಯದಲ್ಲಿ ನಡೆದ 14 ವರ್ಷದ ವಯೋಮಿತಿಯ ಕ್ರಿಕೆಟ್ ಪಂದ್ಯದಲ್ಲಿ ಗದಗ ಸ್ಪೋರ್ಟ್ಸ್ ಅಕಾಡೆಮಿ ತಂಡ ಜಯ ಗಳಿಸಿದೆ.

ಹುಬ್ಬಳ್ಳಿ ತಂಡ ಟಾಸ್ ಗೆದ್ದು, ಮೊದಲು ಫೀಲ್ಡಿಂಗ್ ಆಯ್ದುಕೊಂಡಿತ್ತು, ಗದಗ ತಂಡ 31 ಓವರ್‌ಗೆ 105 ರನ್ ಗಳಿಸಿತು. ಗದಗ ಪರ ಮುಬಾಶೀರ್ 23, ಓಂ ಪವಾರ 17 ರನ್ ಮಾಡಿದರು. ಉತ್ತರವಾಗಿ ಗದಗ ತಂಡ ಹುಬ್ಬಳ್ಳಿ ತಂಡವನ್ನು 41 ರನ್‌ಗೆ ಅಲೌಟ್ ಮಾಡಿತು. ಗದಗ ತಂಡದ ಬೌಲರ್ ನೌಮಾನ್ ಹೊನ್ನಾಪುರ 7 ಓವರ್‌ಗೆ 17 ರನ್ ನೀಡಿ ಪ್ರಮುಖ 5 ವಿಕೆಟ್ ಕಬಳಿಸಿದರು. ವೇದಾಂತು 1.1



ಓವರ್ ಬೌಲಿಂಗ್ ಮಾಡಿ ಹ್ಯಾಟ್ರಿಕ್ ಮೂಲಕ 4 ವಿಕೆಟ್ ಪಡೆದರು. ಪೃಥ್ವಿ ಚಪ್ಪರಮಣಿ 1 ವಿಕೆಟ್ ಪಡೆದು ಗೆಲುವು ಕಂಡರು.

# ಶರಣ ಸಂಗಮ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ನ. 16ರ ಬೆಳಿಗ್ಗೆ 10ಕ್ಕೆ ನಡೆಯಲಿರುವ ಬಸವದಳದ 1672ನೇ ಶರಣ ಸಂಗಮದಲ್ಲಿ 'ಬಸವಾದಿ ಶರಣರ ವಚನಗಳಲ್ಲಿ ಜೀವನ ಮೌಲ್ಯ' ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಅಧ್ಯಕ್ಷತೆಯನ್ನು ಬಸವದಳದ ಹಿರಿಯರಾದ ಶರಣ ಎಸ್.ಎನ್. ಹಕಾರಿ ವಹಿಸುವರು. ಶರಣ ಸಾಹಿತಿಗಳಾದ ಶರಣೆ ಗಿರಿಜಕ್ಕ ಧರ್ಮರಡ್ಡಿ ಉಪನ್ಯಾಸ ಮಾಡುವರು.

ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

## ದೆಹಲಿ ಸ್ಫೋಟ ತನಿಖೆ: ಉಗ್ರರೊಂದಿಗೆ ಸಂಪರ್ಕ ಆರೋಪದಲ್ಲಿ ಮತ್ತೊಬ್ಬ ವೈದ್ಯನ ಬಂಧನ

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ದೆಹಲಿ ಕಾರು ಸ್ಫೋಟ ಪ್ರಕರಣದ ತನಿಖೆ ನಡೆಸುತ್ತಿರುವ ಓಐಎ, ಅಲ್ ಫಲಾಹ್ ವಿಶ್ವವಿದ್ಯಾಲಯದ ಯುವ ವೈದ್ಯರನ್ನು ಬಂಧಿಸಿದೆ.

ಪಶ್ಚಿಮ ಬಂಗಾಳದ ಉತ್ತರ ದಿನಾಜ್‌ಪುರ ಜಿಲ್ಲೆಯ ದಾಲ್ಖೋಲಾ ಪ್ರದೇಶದ ಸೂರ್ಯಪುರ ಮಾರುಕಟ್ಟೆಯಿಂದ ಫರಿದಾಬಾದ್ ಮೂಲದ ವಿಶ್ವವಿದ್ಯಾಲಯದಿಂದ 2024 ರಲ್ಲಿ ಎಂಬಿಬಿಎಸ್ ಪದವೀಧರನಾದ ಝುನಿಶಾರ್ ಆಲಂ ಎಂಬಾತನನ್ನು ರಾಷ್ಟ್ರೀಯ ಭಯೋತ್ಪಾದನಾ ನಿಗ್ರಹ ಸಂಸ್ಥೆ, ದೆಹಲಿ ಪೊಲೀಸರೊಂದಿಗೆ ಶುಕ್ರವಾರ ಬಂಧಿಸಿದೆ. ಕೆಂಪು ಕೋಟೆ ಬಳಿ ನಡೆದ ಸ್ಫೋಟದಲ್ಲಿ 13 ಜನರು ಸಾವನ್ನಪ್ಪಿ 20 ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದರು.

ನವೆಂಬರ್ 12 ರಂದು ಮದುವೆ ಸಮಾರಂಭದಲ್ಲಿ ಭಾಗವಹಿಸಲು ತನ್ನ ಹುಟ್ಟೂರು ಕೋನಾಲ್ ಗ್ರಾಮಕ್ಕೆ ಬಂದಿದ್ದ ಝುನಿಶಾರ್ ಅವರನ್ನು ವಿಚಾರಣೆಗಾಗಿ ಸಿಲಿಗುರಿಗೆ ಕರೆದೊಯ್ಯಲಾಯಿತು. ಅವರು ಮತ್ತು ಅವರ ತಂದೆ ತೌಹಿದ್ ಆಲಂ ಲುಧಿಯಾನದಲ್ಲಿ ವಾಸಿಸುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಸುಳಿವು ದೊರೆತ ಹಿನ್ನೆಲೆಯಲ್ಲಿ, ಎನ್‌ಐಎ ಅಧಿಕಾರಿಗಳು ಮೊದಲು ಲುಧಿಯಾನದಲ್ಲಿರುವ ತೌಹಿದ್ ಅವರನ್ನು ಸಂಪರ್ಕಿಸಿ ಅವರ ಮಗನ ಬಗ್ಗೆ ವಿವರಗಳನ್ನು ಸಂಗ್ರಹಿಸಿದರು. ತೌಹಿದ್‌ನಿಂದ ಝುನಿಶಾರ್ ಇರುವ ಸ್ಥಳದ ಬಗ್ಗೆ ತಿಳಿದುಕೊಂಡು ನಂತರ ದಲ್ಖೋಲಾಗೆ ಧಾವಿಸಿದರು ಎಂದು ಮೂಲಗಳು ತಿಳಿಸಿವೆ.

**ಕಾಡಸಿದ್ದೇಶ್ವರ ಶ್ರೀಗಳಿಗೆ ನಿರ್ಬಂಧ ಖಂಡಿಸಿ ಹಮ್ಮಿಕೊಂಡಿದ್ದ ಬೃಹತ್ ಪ್ರತಿಭಟನೆಯಲ್ಲಿ ಶಾಸಕ ಸಿ.ಸಿ. ಪಾಟೀಲ**

# ದಬ್ಬಾಳಿಕೆಯಿಂದ ರಾಜ್ಯ ಆಳುವುದು ಸರಿಯಲ್ಲ



> ಪಾಕಿಸ್ತಾನ ಜಿಂದಾಬಾದ್ ಅಂದವರಿಗೆ, ಧರ್ಮಸ್ಥಳದ ಬಗ್ಗೆ ಅಪಪ್ರಚಾರ ಮಾಡಿದವರಿಗೆ ನಿರ್ಬಂಧವಿಲ್ಲ. ಆದರೆ, ಧರ್ಮ, ದೇಶ ರಕ್ಷಕರಿಗೆ ನಿರ್ಬಂಧ ಹೇರಿರುವುದು ಸರಿಯಲ್ಲ. ಹಿಂದೂತ್ವ ವಿರೋಧಿ ದೋರಣೆ ಅನುಸರಿಸಿದರೆ ಬಿಹಾರದಲ್ಲಿ ಕಾಂಗ್ರೆಸ್‌ಗೆ ಆದ ಪರಿಸ್ಥಿತಿ ರಾಜ್ಯದಲ್ಲಿಯೂ ಆಗಬಹುದು.
>
> **– ರಾಘು ಯಳವತ್ತಿ.**
> ಕಾಡಸಿದ್ದೇಶ್ವರ ಶ್ರೀಗಳ ಭಕ್ತರು.

**■ವಿಜಯಸಾಕ್ಷಿ ಸುದ್ದಿ, ಗದಗ**

ಕನ್ನೇರಿ ಮಠದ ಅದೃಶ್ಯ ಶ್ರೀ ಕಾಡಸಿದ್ದೇಶ್ವರ ಶ್ರೀಗಳಿಗೆ ವಿಜಯಪುರ, ಬಾಗಲಕೋಟೆ ಹಾಗೂ ಧಾರವಾಡ ಜಿಲ್ಲೆಗೆ ನಿರ್ಬಂಧ ಹೇರಿರುವ ರಾಜ್ಯ ಸರ್ಕಾರದ ನಡೆಯನ್ನು ಖಂಡಿಸಿ ಪಾದಯಾತ್ರೆ ಮೂಲಕ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು. ನಗರದ ಚೆನ್ನಮ್ಮ ಸರ್ಕಲ್‌ನಿಂದ ಆರಂಭವಾದ ಪಾದಯಾತ್ರೆ ಮುಳಗುಂದ ನಾಕಾ ಮಾರ್ಗವಾಗಿ ಡಿಸಿ ಕಛೇರಿ ತಲುಪಿ ನಿರ್ಬಂಧ ತೆರವುಗೊಳಿಸುವಂತೆ ಆಗ್ರಹಿಸಿ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಶಾಸಕ ಸಿ.ಸಿ ಪಾಟೀಲ ಮಾತನಾಡಿ, ಕಾಡಸಿದ್ದೇಶ್ವರ ಶ್ರೀಗಳು ರೈತರಿಗೆ ಸಾವಯವ ಕೃಷಿಯಲ್ಲಿ ಯಾವ ರೀತಿ ಸುಧಾರಣೆ ತರಬೇಕು ಎನ್ನುವುದನ್ನು ಹೇಳಿಕೊಡುತ್ತಾರೆ. ಗರ್ಭಿಣಿಯರಿಗೆ ಸಂಸ್ಕಾರದ ಪಾಠ, ಯುವಕರಿಗೆ ಸಂಸ್ಕೃತಿಯ ನೀತಿಪಾಠಗಳನ್ನು ಶ್ರೀಗಳು ಹೇಳುತ್ತಾರೆ. ಸರ್ಕಾರ ಮಾಡದ ಕೆಲಸಗಳನ್ನು ಶ್ರೀಗಳು ಮಾಡುತ್ತಿದ್ದಾರೆ. ಅವರು ಹಿಂದೂತ್ವವಾದಿ ಎನ್ನುವ ಒಂದೇ ಒಂದು ಕಾರಣಕ್ಕೆ ಅವರಿಗೆ ನಿರ್ಬಂಧ ಹೇರಿದ್ದು ಸರಿಯಲ್ಲ. ನೀವು ಅವರಿಗೆ ನಿರ್ಬಂಧ ಹೇರಿರಬಹುದು. ಆದರೆ, ಶ್ರೀಗಳು ಭಕ್ತರ ಮನಸ್ಸಿನಲ್ಲಿ ಅಚ್ಚಳಿಯದೇ ಉಳಿದಿದ್ದಾರೆ. ಅವರ ಮೇಲೆ ಹೇರಿರುವ ನಿರ್ಬಂಧ ತೆರವುಗೊಳಿಸಿ ಮುಕ್ತ ವ್ಯವಸ್ಥೆ ಕಲ್ಪಿಸಬೇಕು. ದಬ್ಬಾಳಿಕೆಯಿಂದ ರಾಜ್ಯ ಆಳುವುದು ಸರಿಯಲ್ಲ. ಅಧಿಕಾರ ಶಾಶ್ವತವಲ್ಲ. ಮುಖ್ಯಮಂತ್ರಿಗಳೇ ನೀವು ಅವರ ಮಠಕ್ಕೆ ಒಮ್ಮೆ ಹೋಗಿ ನೋಡಿ. ಆಗ ನೀವು ಮಾಡುವುದು ತಪ್ಪು ಎಂದು ನಿಮಗೇ ಅನಿಸುತ್ತದೆ ಎಂದು ಸಿಎಂ ಸಿದ್ದರಾಮಯ್ಯ ಅವರಿಗೆ ಬುದ್ಧಿಮಾತು ಹೇಳಿದರು.

ಶ್ರೀ ಪ್ರಶಾಂತ ಮಹಾರಾಜರು ಮಾತನಾಡಿ, ಸನಾತನ ಧರ್ಮದ ರಕ್ಷಣೆಯನ್ನು ಕಾಡಸಿದ್ದೇಶ್ವರ ಶ್ರೀಗಳು ಮಾಡುತ್ತಿದ್ದಾರೆ. ಇದೇ ಕಾರಣಕ್ಕೆ ಅವರಿಗೆ ನಿರ್ಬಂಧ ಹೇರಲಾಗುತ್ತಿದೆ. ಸ್ವಾಮೀಜಿಗಳಿಗೆ ನಿರ್ಬಂಧ ಹೇರುವ ದುಷ್ಟ ಕಾರ್ಯವನ್ನು ರಾಜ್ಯ ಸರ್ಕಾರ ಮಾಡುತ್ತಿದೆ. ಹಿಂದೆ ನಮ್ಮನ್ನು ಹಲವು ದಶಕಗಳ ಕಾಲ ಆಳಿದ ಮೊಘಲರು, ಡಚ್ಚರು, ಪೋರ್ಚುಗೀಸರಿಗೆ ನಮ್ಮ ಧರ್ಮಕ್ಕೆ ಏನೂ ಮಾಡಲಾಗಲಿಲ್ಲ. ಕೇವಲ ಒಂದು ಕಾಂಗ್ರೆಸ್ ಸರ್ಕಾರ ಏನು ತಾನೇ ಮಾಡಲು ಸಾಧ್ಯ ಎಂದು ಪ್ರಶ್ನಿಸಿದರು.

ಪ್ರತಿಭಟನೆಯಲ್ಲಿ ವಿಜಯಪುರದ ಕೈವಲ್ಯಕುಟೀರ ಪ್ರಣವಪ್ರಕಾಶ ಮಹಾರಾಜರು, ಕನಕನಾಳದ ಗಿರೀಶಾನಂದ ಮಹಾರಾಜರು, ಹಂಸನೂರಿನ ಶ್ರೀ ಅಭಿನವ ಬಸವರಾಜೇಂದ್ರ ಸ್ವಾಮೀಜಿಗಳು, ಕನ್ನೂರಿನ ಗಿರಿಮಲ್ಲೇಶ್ವರ ಮಹಾರಾಜರು, ಕನ್ನೂರಿನ ಸದಾಶಿವ ಮಹಾರಾಜರು, ಸಿದ್ದಾಪೂರದ ಅರವಿಂದ ಮಹಾರಾಜರು, ಬಸವನಬಾಗೇವಾಡಿಯ ಅಭಿಯಾನಂದ ಮಹಾರಾಜರು, ಲಿಂಗದಾಳದ ಶ್ರೀ ಚೆನ್ನಮಲ್ಲಿಕಾರ್ಜುನ ಮಹಾರಾಜರು, ವಸಂತಗೌಡ ಪೊಲೀಸ್‌ಪಾಟೀಲ, ಪ್ರದೀಪ ನವಲಗುಂದ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ, ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ, ಪ್ರಮುಖರಾದ ವಿಜಯಕುಮಾರ ಗಡ್ಡಿ, ಸುಧೀರ ಖಾಟಗೇರ, ರವಿ ವಗ್ಗಣ್ಣನವರ ಸೇರಿದಂತೆ ಶ್ರೀಗಳ ಭಕ್ತರು ಭಾಗವಹಿಸಿದ್ದರು.

# ಯಕ್ಲಾಸಪೂರ ಪ್ರೌಢಶಾಲೆಗೆ 'ಉತ್ತಮ ಶಾಲೆ' ಬಹುಮಾನ



**■ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಕನ್ನಡ ಗೆಳೆಯರ ಬಳಗವು ಪ್ರತಿ ವರ್ಷ ಉತ್ತಮ ನಿರ್ವಹಣೆ ತೋರಿರುವ ಕನ್ನಡ ಮಾಧ್ಯಮ ಶಾಲೆಗೆ ನೀಡುವ 'ಉತ್ತಮ ಶಾಲೆ' ಬಹುಮಾನಕ್ಕೆ ಗದಗ ಜಿಲ್ಲೆಯ ಮುಂಡರಗಿಯ ಯಕ್ಲಾಸಪೂರದ ಶ್ರೀಮತಿ ಪಾರ್ವತೆವ್ವ ಕೋಂ ಹಿರೇಬಸಪ್ಪ ಹಳೇಮನಿ ಸರ್ಕಾರಿ ಪ್ರೌಢ ಶಾಲೆಯನ್ನು ಆಯ್ಕೆ ಮಾಡಲಾಗಿದೆ. ಈ ಬಹುಮಾನವನ್ನು ಸಾಹಿತಿ ಪ್ರೊ. ಎಲ್.ಎಸ್. ಶೇಷಗಿರಿರಾವ್ ಅವರ ಶತಮಾನೋತ್ಸವದ ನೆನಪಿನಲ್ಲಿ ನೀಡಲಾಗುತ್ತಿದೆ.

ಸತತ 11 ವರ್ಷಗಳಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಇಲ್ಲಿನ ವಿದ್ಯಾರ್ಥಿಗಳು ಶೇ.100 ಹಾಗೂ ಪ್ರಸ್ತುತ ಸಾಲಿನಲ್ಲಿ ಶೇ. 90ರಷ್ಟು ಫಲಿತಾಂಶ ದಾಖಲಿಸಿದ್ದಾರೆ. ಶಾಲೆಯು ಉತ್ತಮ ಕಟ್ಟಡ ಹೊಂದಿದ್ದು, ವಿಜ್ಞಾನ, ಕಂಪ್ಯೂಟರ್ ಪ್ರಯೋಗಾಲಯಗಳು, ಸಭಾಂಗಣ ಎಲ್ಲವೂ ವ್ಯವಸ್ಥಿತವಾಗಿವೆ. ಶಾಲೆಯ ಅದ್ಯಾಪಕರು ಸ್ವಂತ ಹಣದಿಂದ ಉತ್ತಮ ಶೌಚಾಲಯ ವ್ಯವಸ್ಥೆ ಮಾಡಿರುವುದು ಗಮನೀಯ ಅಂಶ. ಹೀಗೆ ಹಲವು ನೆಲೆಗಳಲ್ಲಿ ಈ ಶಾಲೆಯಲ್ಲಿ ಉತ್ತಮ ವಾತಾವರಣ ಇದೆ ಎಂಬುದು ಕನ್ನಡ ಕಾರ್ಯಕರ್ತರ ಅಭಿಪ್ರಾಯ.

ಡಿಸೆಂಬರ್ 9ರಂದು ಬೆಂಗಳೂರಿನ ನಯನಾ ಸಭಾಂಗಣದಲ್ಲಿ ಪ್ರೊ. ಮಲ್ಲೇಪುರಂ ವೆಂಕಟೇಶ್ ಅವರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಸಮಾರಂಭದಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ, ಡಾ. ಎಲ್. ಹನುಮಂತಯ್ಯ ಅವರು ಕನ್ನಡ ಗೆಳೆಯರ ಬಳಗದ ವಾರ್ಷಿಕ ಪ್ರಶಸ್ತಿ ಪ್ರದಾನ, ಪುಸ್ತಕ ಬಹುಮಾನ, ಪ್ರದಾನ ಮಾಡುವರು. ಅದೇ ಸಮಾರಂಭದಲ್ಲಿ 2025ನೇ ಸಾಲಿನ ಉತ್ತಮ ಶಾಲೆ ಬಹುಮಾನ ನೀಡಲಾಗವುದು ಎಂದು ಪ್ರಕಟಣೆ ತಿಳಿಸಿದೆ.

**ಶಿವಾನುಭವ ಕಾರ್ಯಕ್ರಮದಲ್ಲಿ ಭೈರನಹಟ್ಟಿಯ ಶ್ರೀ ಶಾಂತಲಿಂಗ ಸ್ವಾಮಿಗಳು**

# ಕನಕದಾಸರು ಭಕ್ತಿಯ ಪ್ರತೀಕ

**■ವಿಜಯಸಾಕ್ಷಿ ಸುದ್ದಿ, ಗದಗ**



ಕನಕದಾಸರು ಕೇವಲ ಒಬ್ಬ ಕವಿ ಮತ್ತು ಸಂತ ಮಾತ್ರವಲ್ಲ. ಅವರು ಜಾತ್ಯಾತೀತ ಮತ್ತು ಭಕ್ತಿಯ ಪ್ರತೀಕ ಎಂದು ಭೈರನಹಟ್ಟಿಯ ಪೂಜ್ಯ ಶ್ರೀ ಶಾಂತಲಿಂಗ ಮಹಾಸ್ವಾಮಿಗಳು ನುಡಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2771ನೇ ಶಿವಾನುಭವದ ಸಮ್ಮುಖ ವಹಿಸಿ ಮಾತನಾಡಿದ ಶ್ರೀಗಳು, ಬಯಲು ಆಲಯದೊಳಗೊ, ಆಲಯದೊಳಗೆ ಬಯಲೋ ಎಂದು ಸಾರಿದವರು ಸಂತ ಶ್ರೇಷ್ಠ ಕನಕದಾಸರು. ತೊ–ರೆದು ಜೀವಿಸಬಹುದೇ ಹರಿಯೇ ಎನ್ನುತ್ತಾ ಬದುಕಿದ ಭಕ್ತಿ ಪಂಥದ ಶ್ರೇಷ್ಠ ಸಂತ. ಸಮಾಜದಲ್ಲಿನ ಅನಿಷ್ಟ ಪದ್ಧತಿಯ ವಿರುದ್ಧ ಧ್ವನಿಯೆತ್ತಿದ ದಾರ್ಶನಿಕರು. ಹಾಗೆಯೇ ರಾಜಪೀಠ ತೊರೆದು ದಾಸಪೀಠ ಏರಿದ ಮಹಾನ್ ಸಂತ ಶ್ರೇಷ್ಠರು ಕನಕದಾಸರು ಎಂದು ಹೇಳಿದರು.

ಕನಕಸಿರಿ ಪ್ರಶಸ್ತಿಗೆ ಭಾಜನರಾದ ನಿವೃತ್ತ ಪ್ರಾಚಾರ್ಯ ಡಾ. ಎನ್.ಎಂ. ಅಂಬಲಿಯವರನ್ನು ಸನ್ಮಾನಿಸಲಾಯಿತು. ಮುಖ್ಯ ಅತಿಥಿಗಳಾಗಿ ಕುರುಬರ ಸಮಾಜದ ಜಿಲ್ಲಾಧ್ಯಕ್ಷ ಫಕೀರಪ್ಪ ಹೆಬಸೂರ ಉಪಸ್ಥಿತರಿದ್ದರು. ವಚನ ಗಾಯನವನ್ನು ಐಶ್ವರ್ಯ ಹೂಲಿ, ಲಾವಣ್ಯ ಉತ್ತರಕರ, ತಬಲಾವನ್ನು ಕುಮಾರ ಭುವನ, ಕೊಳಲು ವಾದನವನ್ನು ಕುಮಾರ್ ಶ್ರೇಯಸ್ಸು ಮನಮೋಹಕವಾಗಿ ಪ್ರಸ್ತುತಪಡಿಸಿದರು. ವಚನ ಸಂಗೀತ ಗುರುನಾಥ್ ಸುತಾರ ಹಾಗೂ ಮೃತ್ಯುಂಜಯ ಹಿರೇಮಠ ನಡೆಸಿಕೊಟ್ಟರು. ಧಾರ್ಮಿಕ ಗ್ರಂಥ ಪಠಣವನ್ನು ಸಂಜನಾ ಎಂ.ಹದ್ಲಿ ಹಾಗೂ ವಚನ ಚಿಂತನವನ್ನು ಜೈಬಾ ಎಂ.ನಾಗನೂರು ನಡೆಸಿಕೊಟ್ಟರು. ದಾಸೋಹ ಸೇವೆಯನ್ನು ಮುರುಘರಾಜೇಂದ್ರ ಮಹಾಂತಣ್ಣ ಬಡ್ನಿ ಹಾಗೂ ಕುಟುಂಬ ವರ್ಗದವರು ಮತ್ತು ಹುಚ್ಚಣ್ಣ ರೇವಣಪ್ಪ ಶಹಾಪೂರ ವಹಿಸಿದ್ದರು. ನಾಡು–ನುಡಿಯ ಸಾಮೂಹಿಕ ನೃತ್ಯರೂಪಕ ಗುರುಬಸವ ಸಿಬಿಎಸ್‌ಇ ಶಾಲೆಯ ವಿದ್ಯಾರ್ಥಿಗಳಿಂದ ಜರುಗಿತು. ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಡಾ. ಉಮೇಶ ಪುರದ ಹಾಗೂ ವಿದ್ಯಾ ಪ್ರಭು ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹ ಕಾರ್ಯದರ್ಶಿ ಸೋಮನಾಥ ಪುರಾಣಿಕ, ನಾಗರಾಜ್ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿಯ ಸಹ ಚೇರಮನ್ ಶಿವಾನಂದ ಹೊಂಬಳ ಹಾಗೂ ಮಠದ ಭಕ್ತರು ಉಪಸ್ಥಿತರಿದ್ದರು.

ಶಿವಾನುಭವ ಸಮಿತಿಯ ಚೇರಮನ್ ಐ.ಬಿ. ಬೆನಕೊಪ್ಪ ಸ್ವಾಗತಿಸಿದರು. ವಿದ್ಯಾ ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು.

> ಕೆ.ಎಲ್.ಇ. ಸಂಸ್ಥೆಯ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಡಾ. ವೀಣಾ ಈ ಉಪನ್ಯಾಸ ನೀಡಿ, ಕನಕದಾಸರು ಭಕ್ತಿಯ ಸೆಳೆತ ಜಾಸ್ತಿಯಾಗಿ, ಆಧ್ಯಾತ್ಮಿಕವಾಗಿ ತಾರತಮ್ಯವಿಲ್ಲದೆ ಹೇಗೆ ಬದುಕಬೇಕೆನ್ನುವ ತತ್ವವನ್ನು ಕೀರ್ತನೆಗಳು ಸಾರುತ್ತವೆ. ಭಕ್ತನಿಗೆ ದೇವರ ಮೇಲಿನ ಪ್ರೇಮಕ್ಕಿಂತ ಭಕ್ತನ ಮೇಲಿನ ಪ್ರೇಮವೇ ಪ್ರಾಮುಖ್ಯತೆಯಾಗಿದೆ. ಸಂತ ಕನಕದಾಸರು 316 ಕೀರ್ತನೆಗಳನ್ನು ಬರೆದಿದ್ದಾರೆ. ತಾರತಮ್ಯವಿಲ್ಲದ ಸಮಾಜವನ್ನು ಹೇಗೆ ಕಟ್ಟಬೇಕು ಎಂಬುದನ್ನು ಕನಕದಾಸರು ತಿಳಿಸಿದ್ದಾರೆ ಎಂದರು.

# ಬಿಜೆಪಿ ವಿಜಯೋತ್ಸವ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟದ ಗೆಲುವಿಗೆ ನರೇಗಲ್ಲ ಬಿಜೆಪಿ ಹಾಗೂ ಜೆಡಿಎಸ್ ಮುಖಂಡರು, ಕಾರ್ಯಕರ್ತರು ಬಸ್ ನಿಲ್ದಾಣದ ವೃತ್ತದಲ್ಲಿ ಪಟಾಕಿ ಸಿಡಿಸಿ ವಿಜಯೋತ್ಸವ ಆಚರಿಸಿದರು.

ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ ಹಾಗೂ ನಿತೀಶ್ ಕುಮಾರ್ ಹೆಸರುಗಳನ್ನು ಕೂಗಿ ಜೈಕಾರ ಹಾಕಿದ ಮುಖಂಡರು ಪರಸ್ಪರ ಸಿಹಿ ತಿನಿಸಿ ಸಂಭ್ರಮಿಸಿದರು.

ರೋಣ ಮಂಡಲ ಬಿಜೆಪಿ ಮಾಜಿ ಅಧ್ಯಕ್ಷ ಮುತ್ತಣ್ಣ ಕಡಗದ ಮಾತನಾಡಿ, ಮತ ಕಳವು ಹೆಸರಿನಲ್ಲಿ ಕಾಂಗ್ರೆಸ್ ಪ್ರಜಾಪ್ರಭುತ್ವ ವ್ಯವಸ್ಥೆಯನ್ನೇ ಅಣಕಿಸುವಂತೆ ಮಾಡಿದ್ದರಿಂದ ಬಿಹಾರದ ಜನ ತಕ್ಕ ಪಾಠ ಕಲಿಸಿದ್ದಾರೆ. ರಾಹುಲ್ ಗಾಂಧಿ ಇನ್ನು ಮುಂದಾದರೂ ಪಾಠ ಕಲಿಯಬೇಕು ಎಂದರು.

ಪ್ರಕಾಶ ಹಕ್ಕಿ, ಪ.ಪಂ ಮಾಜಿ ಸದಸ್ಯ ಯಲ್ಲಪ್ಪ ಮಣ್ಣೊಡ್ಡರ, ಮಲ್ಲಿಕಾರ್ಜುನಗೌಡ ಭೂಮನಗೌಡ್ರ, ಹುಲಗಪ್ಪ ಬಂಡಿವಡ್ಡರ, ಮಹೇಶ ಶಿವಶಿಂಪರ, ವೀರಣ್ಣ ಅಣ್ಣಿಗೇರಿ, ವೀರೇಶ ಮಣ್ಣೊಡ್ಡರ, ಶಿವು ಎಸ್, ಎಂ.ಜಿ. ಪಾಟೀಲ ಮುಂತಾದವರಿದ್ದರು.



# ಮೆಣಸಗಿ ಶಾಲೆಯಲ್ಲಿ ಮಕ್ಕಳ ದಿನಾಚರಣೆ



**■ವಿಜಯಸಾಕ್ಷಿ ಸುದ್ದಿ, ಗದಗ**

ರೋಣ ತಾಲೂಕಿನ ಮೆಣಸಗಿ ಗ್ರಾಮದ ಶ್ರೀ ಲಿಂಗಬಸವೇಶ್ವರ ಕಿರಿಯ ಪ್ರಾಥಮಿಕ ಶಾಲೆ ಹಾಗೂ ಸರ್ಕಾರಿ ಪ್ರಾಥಮಿಕ ಪ್ರೌಢಶಾಲೆಯಲ್ಲಿ ಪಂಡಿತ ಜವಾಹರಲಾಲ್ ನೆಹರೂ ಅವರ ಜನ್ಮದಿನಾಚರಣೆ ಅಂಗವಾಗಿ ಮಕ್ಕಳ ದಿನಾಚರಣೆ ಹಾಗೂ ಪೋಷಕ–ಪಾಲಕರ ಮಹಾಸಭೆ ಶುಕ್ರವಾರ ಯಶಸ್ವಿಯಾಗಿ ಜರುಗಿತು.

ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಅವರು ಪಂಡಿತ ಜವಾಹರಲಾಲ್ ನೆಹರೂ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಮಕ್ಕಳ ಭವಿಷ್ಯ ನಿರ್ಮಾಣದಲ್ಲಿ ಶಾಲೆ ಹಾಗೂ ಮನೆಯ ಪಾತ್ರ ಪ್ರಮುಖವಾಗಿದೆ. ಶಾಲೆಗಳಲ್ಲಿ ವಿದ್ಯಾರ್ಥಿಗಳ ಹಾಜರಾತಿ, ಅಧ್ಯಯನದ ಗುಣಮಟ್ಟ, ಪರೀಕ್ಷಾ ಫಲಿತಾಂಶ, ಪೋಷಕಾಂಶಯುಕ್ತ ಆಹಾರ, ಸ್ವಚ್ಛತೆ, ಆರೋಗ್ಯ, ಬಾಲ್ಯ ವಿವಾಹ, ಮಕ್ಕಳ ಮೇಲಿನ ಹಿಂಸೆ, ಬಾಲಕಾರ್ಮಿಕ ಪದ್ಧತಿ, ಪೋಕ್ಸೋ ಕಾಯ್ದೆ ಕುರಿತಂತೆ ಅರಿವು ಹೊಂದುವುದು ಇಂದಿನ ಅಗತ್ಯವಾಗಿದೆ ಎಂದು ಹೇಳಿದರು.

ಶಾಲಾ ಅಭಿವೃದ್ಧಿಗೆ ಪಾಲಕರ ಸಕ್ರಿಯ ಸಹಕಾರ ಅತ್ಯಗತ್ಯ. ಮಕ್ಕಳು ಮಧ್ಯಾಹ್ನದ ಊಟ, ಕ್ರೀಡೆ, ಪುಸ್ತಕ ಓದು ಇತ್ಯಾದಿ ವಿಷಯಗಳಲ್ಲಿ ಸಂಪೂರ್ಣವಾಗಿ ಭಾಗವಹಿಸುವಂತೆ ಪೋಷಕರು ತಮ್ಮ ಮಕ್ಕಳಿಗೆ ಪ್ರೋತ್ಸಾಹಿಸಬೇಕು. ತಮ್ಮ ಮಕ್ಕಳ ಆಸಕ್ತಿಗನುಗುಣವಾಗಿ ಪ್ರೋತ್ಸಾಹ ನೀಡುವ ಮೂಲಕ ಮಕ್ಕಳ ಸಾಧನೆಗೆ ಪಾಲಕರು ಹಾಗೂ ಶಿಕ್ಷಕರು ನಿರಂತರ ಶ್ರಮಿಸಬೇಕೆಂದು ತಿಳಿಸಿದರು. ಕಾರ್ಯಕ್ರಮದಲ್ಲಿ ರೋಣ ತಹಸೀಲ್ದಾರರು, ಶಾಲಾ ಮುಖ್ಯೋಪಾಧ್ಯಾಯರು, ಸಹ ಶಿಕ್ಷಕರು, ಪೋಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ದೆಹಲಿ ವಿಧ್ವಂಸಕ ಕೃತ್ಯ ಖಂಡನೀಯ

**■ವಿಜಯಸಾಕ್ಷಿ ಸುದ್ದಿ, ಬೀದರ**



ಇತ್ತೀಚೆಗೆ ದೆಹಲಿಯ ಕೆಂಪು ಕೋಟೆಯ ಸಮೀಪ ನಡೆದ ಬ್ಲಾಸ್ಟ್‌ನಂತಹ ವಿಧ್ವಂಸಕ ಕೃತ್ಯವನ್ನು ತೀವ್ರವಾಗಿ ಖಂಡಿಸುವುದಾಗಿ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ತಿಳಿಸಿದರು.

ಬೀದರಿನಲ್ಲಿ ಬುಧವಾರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಜೀವಗಳನ್ನು ಉಳಿಸಬೇಕಾದ ವೈದ್ಯರೇ ಜೀವಿಗಳನ್ನು ವಿಧ್ವಂಸಕ ಕೃತ್ಯಗಳಿಂದ ಹಲವಾರು ಬಲಿ ತೆಗೆದುಕೊಂಡಿರುವುದು ಅಮಾನವೀಯ ಘಟನೆಯಾಗಿದೆ. ಪ್ರಜ್ಞಾವಂತ ಜನರು ಈ ಜೀವ ಸಂಕುಲವನ್ನು ನಾಶ ಮಾಡುವ ಕೃತ್ಯದಲ್ಲಿ ಭಾಗಿಯಾಗಿರುವುದು ನೋವಿನ ಸಂಗತಿ. ಈ ನೀಚ ಕೃತ್ಯವನ್ನು ಜಾತ್ಯಾತೀತವಾಗಿ, ಪಕ್ಷಾತೀತವಾಗಿ ಖಂಡಿಸಬೇಕಾದ ಅವಶ್ಯಕತೆ ಇದೆ.

ಜನತೆ ಸೌಹಾರ್ದಯುತವಾಗಿ ಬಾಳಬೇಕು. ತಾತ್ವಿಕ ತಳಹದಿಯ ಮೇಲೆ ನಡೆಯಬೇಕೆಂಬ ಬೋಧನೆಯನ್ನು ಮಾಡುತ್ತಿದ್ದೇವೆ. ಕೇಂದ್ರ ಸರ್ಕಾರ ಈ ಭಯೋತ್ಪಾದಕ ಕೃತ್ಯದಲ್ಲಿ ಭಾಗಿಯಾದವರನ್ನು ಹುಡುಕಿ ಸದೆಬಡಿಯಬೇಕು. ಇಂತಹ ಕೃತ್ಯಗಳು ಮತ್ತೆ ನಡೆಯದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂದ ಅವರು, ಇಂತಹ ಕೃತ್ಯಗಳನ್ನು ಧರ್ಮ ಪೀಠಗಳು ಸದಾ ಖಂಡಿಸುತ್ತವೆ ಎಂದು ತಿಳಿಸಿದರು.

# ಕೊಡಗು; ಕಾರಿನಲ್ಲಿ ಶವ ಸಾಗಾಟಕ್ಕೆ ಯತ್ನಿಸಿದ ಮೂವರ ಬಂಧನ

**■ವಿಜಯಸಾಕ್ಷಿ ಸುದ್ದಿ, ಕೊಡಗು**

ಕೊಡಗು ಜಿಲ್ಲೆಯ ಮಾಲ್ದಾರೆ ಲಿಂಗಾಪುರ ಚೆಕ್ ಪೋಸ್ಟ್ ಬಳಿ ಕಾರೊಂದರಲ್ಲಿ ಶವ ಸಾಗಾಟ ಮಾಡುತ್ತಿದ್ದ ಮೂವರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ.

ಕೊಡಗು ಜಿಲ್ಲೆಯ ಮಾಲ್ದಾರೆ ಲಿಂಗಾಪುರ ಚೆಕ್ ಪೋಸ್ಟ್‌ನಲ್ಲಿರುವ ಅರಣ್ಯ ಇಲಾಖೆ ಸಿಬ್ಬಂದಿ ನಿಯಮಿತ ವಾಹನ ತಪಾಸಣೆಯ ಸಮಯದಲ್ಲಿ ಅನುಮಾನಗೊಂಡು ಕಾರೊಂದನ್ನು ತಪಾಸಣೆ ನಡೆಸಿದ್ದು, ಈ ವೇಳೆ ಕಾರಿನಲ್ಲಿ ಮಹಿಳೆಯೊಬ್ಬರ ಮೃತದೇಹ ಪತ್ತೆಯಾಗಿದೆ ಎಂದು ತಿಳಿದುಬಂದಿದೆ.

ಮೃತ ಮಹಿಳೆಯನ್ನು ನಾಂಕಿ ದೇವಿ (45) ಎಂದು ಗುರುತಿಸಲಾಗಿದ್ದು, ಇವರು ಹರಿಯಾಣ ಮೂಲದವರಾಗಿದ್ದು, ಮೈಸೂರಿನಲ್ಲಿ ತಮ್ಮ ಪತಿಯೊಂದಿಗೆ ವಾಸಿಸುತ್ತಿದ್ದರು ಎಂದ ವರದಿಗಳು ತಿಳಿಸಿವೆ.

ಮಾಹಿತಿ ತಿಳಿದ ಕೂಡಲೆ ಸಿದ್ದಾಪುರ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಮಂಜುನಾಥ್ ಸ್ಥಳಕ್ಕೆ ಭೇಟಿ ನೀಡಿದ್ದು, ಕಾರಿನಲ್ಲಿದ್ದ ಮೂವರನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ. ಈ ಸಂಬಂಧ ಸಿದ್ದಾಪುರ ಪೊಲೀಸರು ಹೆಚ್ಚಿನ ತನಿಖೆ ಕೈಗೊಂಡಿದ್ದಾರೆ.


**ಪಟ್ಟಣ ಪಂಚಾಯತ ಕಾರ್ಯಾಲಯ, ನರೇಗಲ**

ನಂ:ಪಪಂನ/ವಾ.ಪೂ/ವಹಿ/2025-26/340 ದಿನಾಂಕ : 15-11-2025

**ಟೆಂಡರ ಪ್ರಕಟಣೆ**

ಸನ್ **2025-26** ನೇ ಸಾಲಿನ **15** ನೇ ಹಣಕಾಸು ಮತ್ತು ಸನ್ **2020-21** ರಿಂದ **2022-23** ನೇ ಸಾಲಿನ ಉಳಿಕೆ **15** ನೇ ಹಣಕಾಸು ಅನುದಾನದಲ್ಲಿ ಕರ್ನಾಟಕ ಪಾರದರ್ಶಕತೆ ಸಾರ್ವಜನಿಕ ಸಂಗ್ರಹಣೆ ಅಧಿನಿಯಮ 2000 ರನ್ವಯ ಕರ್ನಾಟಕ ಲೋಕೋಪಯೋಗಿ ಇಲಾಖೆ ಮತ್ತು ಕೆಪಿಪಿಪಿ ರವರಲ್ಲಿ ನೊಂದಾಯಿತ ಅರ್ಹ ಸಿವ್ಹಿಲ್ ಗುತ್ತಿಗೆದಾರರಿಂದ **KPPP** ಮೂಲಕ ಐಟಂವಾರು ಟೆಂಡರಗಳನ್ನು ಅಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿಯ ತಾಂತ್ರಿಕ ಶಾಖೆಯ ಕೆಲಸದ ವೇಳೆಯಲ್ಲಿ ಪಡೆಯಬಹುದಾಗಿದೆ.

ಇಂಡೆಂಟ್ ಸಂಖ್ಯೆ : **46207/CALL-3, 51721, 51707, 51705, 51725(ST), 51720(SC), 51719(CAT-II(A)**

1.ಟೆಂಡರನ್ನು ಸಲ್ಲಿಸಲು ಕೊನೆಯ ದಿನಾಂಕ : **24-11-2025** ಸಂಜೆ **5.30** ಗಂಟೆಯವರೆಗೆ
2.ಟೆಂಡರ ತೆರೆಯುವ ದಿನಾಂಕ : **26-11-2025** ಬೆಳಿಗ್ಗೆ **11.00** ಗಂಟೆಗೆ

ವಾ.ಸಾ.ಇ/ಗದಗ/387/ ದೇಶಪಾಂಡೆಪಬ್ಲಿಸಿಟಿ/2025-26

ಸಹಿ/– ಮುಖ್ಯಾಧಿಕಾರಿ
ಪಟ್ಟಣ ಪಂಚಾಯತ ನರೇಗಲ್


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka